# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 85 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 10–10–2023 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 85 | Title- Code: KARKAN 28269 | Chitradurga | Date: 10-10-2023 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ರೋಟರಿ ಮೊದಲಿನಿಂದಲೂ ಶಿಕ್ಷಣ, ಆರೋಗ್ಯಕ್ಕೆ ಪ್ರಾಮುಖ್ಯತೆ: ರವೀಂದ್ರ 2

ಹೊಸದುರ್ಗ ಹೇರೂರು ಬಳಿ ಟೋಲ್: ರೈತ ಸಂಘ ವಿರೋಧ 3

ಸುಮಾರು ವರ್ಷಗಳಿಂದ ಜಾಂ ಡಾ ಊರಿದ ಅಧಿಕಾರಿಗಳು ಜಾಗ ಖಾಲಿ ಮಾಡಿ: ಶಾಸಕ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ

» ಚಿತ್ರದುರ್ಗ

2022–23ನೇ ಸಾಲಿನಲ್ಲಿ ಎಸ್ಎಸ್ಎಲ್ಎಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಶೇ.75 ಹಾಗೂ ಬಿ.ಎ, ಬಿ.ಕಾಂ, ಬಿ.ಎಸ್ಸಿ, ಬಿ.ಸಿ.ಎ, ಬಿಎಸ್.ಡಬ್ಲ್ಯೂ, ಇಂಜಿನಿಯರಿಂಗ್, ಎಂ.ಬಿ.ಬಿ.ಎಸ್, ಇತರೆ ಪದವಿ ಪರೀಕ್ಷೆಯಲ್ಲಿ ಶೇ.70 ಅಂಕ ಗಳಿಸಿದ, ಪಿ.ಹೆಚ್.ಡಿ ಪದವಿ ಪಡೆದ, ಐ.ಎ.ಎಸ್, ಐ.ಪಿ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಯಲ್ಲಿ ಆಯ್ಕೆಯಾದ ಚಿತ್ರದುರ್ಗ ಜಿಲ್ಲೆಯ ನಾಯಕ ಸಮಾಜದ ಪ್ರತಿಭಾನ್ವಿತರನ್ನು ಅಭಿನಂದಿಸಲು ಚಿತ್ರದುರ್ಗ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯ ನಾಯಕ ಸಮಾಜದ ಪ್ರತಿಭಾನ್ವಿತರು 2023ರ ನವೆಂಬರ್ 10 ರೊಳಗೆ ನಾಗೇಂದ್ರ ಬಾಬು, ಕಾರ್ಯದರ್ಶಿ, ಚಿತ್ರದುರ್ಗ ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘ, ಶಾಂತಿನಗರ, ಕಾರ್ತಿಕ್ ಪೆಟ್ರೋಲ್ ಬಂಕ್ ಹತ್ತಿರ, #73/3, ಚಿತ್ರದುರ್ಗ, ಮೊಬೈಲ್ 7483639318 ವಿಳಾಸಕ್ಕೆ ತಮ್ಮ ಸ್ವ–ವಿವರದ ಅರ್ಜಿಯ ಜೊತೆ ಪೂರಕ ದಾಖಲಾತಿಗಳೊಂದಿಗೆ ಅಂಚೆ ಮೂಲಕ ಇಲ್ಲವೇ ನೇರವಾಗಿ ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಡಾ.ಹೆಚ್.ಗುಡ್ಡದೇಶ್ವರಪ್ಪ, ಅಧ್ಯಕ್ಷರು, ಚಿತ್ರದುರ್ಗ ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ), ಮದಕರಿ ವೃತ್ತ, ಚಿತ್ರದುರ್ಗ–577501, ಮೊಬೈಲ್ ನಂಬರ್: 9448232934 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ: ಅ.11ರಂದು ಪೂರ್ವಭಾವಿ ಸಭೆ

» ಚಿತ್ರದುರ್ಗ

ಇದೇ ಅಕ್ಟೋಬರ್ 28ರಂದು 2023–24ನೇ ಸಾಲಿನ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಜಿಲ್ಲಾ ಕೇಂದ್ರದಲ್ಲಿ ಆಚರಿಸಬೇಕಾಗಿರುತ್ತದೆ. ವಾಲ್ಮೀಕಿ ಜಯಂತಿಯನ್ನು ಯಶಸ್ವಿಯಾಗಿ ಆಚರಿಸುವ ಸಂಬಂಧ ಪೂರ್ವಸಿದ್ಧತೆ ಮಾಡಿಕೊಳ್ಳಲು ಅಕ್ಟೋಬರ್ 11ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸಭೆಯ ಅಧ್ಯಕ್ಷತೆ ವಹಿಸುವರು.

# ವಿಕಲಚೇತನರು ವಾಹನಗಳನ್ನು ಸದುಪಯೋಗ ಮಾಡಿಕೊಳ್ಳಿ: ರಘುಮೂರ್ತಿ

» ಚಳ್ಳಕೆರೆ

ಯಂತ್ರಚಾಲಿತ ದ್ವಿಚಕ್ರ ವಾಹನಗಳನ್ನು ಸ್ವಯಂ ಉದ್ಯೋಗಕ್ಕೆ ಬಳಸಿಕೊಂಡು ಬದುಕು ಕಟ್ಟಿಕೊಳ್ಳಿ ಎಂದು ಶಾಸಕ ಟಿ.ರಘುಮೂರ್ತಿ ವಿಕಲಚೇತನರಿಗೆ ಕಿವಿ ಮಾತು ಹೇಳಿದರು.

ನಗರದ ಶಾಸಕರ ಭವನದ ಆವರಣದಲ್ಲಿ ಜಿಲ್ಲಾ ಪಂಚಾಯತ್ ಚಿತ್ರದುರ್ಗ ಇವರ ವತಿಯಿಂದಅನಿರ್ಬಂಧಿತಯೋಜನೆಯಡಿ ಐದು ವಿಕಲಚೇತನರಿಗೆ ಯಂತ್ರಾಚಾಲಿತ ದ್ವಿಚಕ್ರ ವಾಹನ (ರೇಟ್ರೋಫಿಟ್ಮೆಂಟ್ ಸಹಿತ) ಗಳನ್ನು ವಿತರಿಸಿ ಮಾತನಾಡಿದರು.

ನಮ್ಮ ಕ್ಷೇತ್ರದಲ್ಲಿ ವಿಕಲಚೇನರಿಗೆ ಹಂತ ಹಂತವಾಗಿ ವಾಹನಗಳನ್ನು ವಿತರಿಸಲಾಗುತ್ತಿದೆ. ಕಳೆದ ಬಾರಿ ಡಿಎಂಎಫ್ ಅನುದಾನ ಮತ್ತು ಶಾಸಕರ ಅನುದಾನ ಸೇರಿ 92 ವಿಕಲಚೇತನರಿಗೆ ವಾಹನಗಳನ್ನು ವಿತರಿಸಲಾಗಿದೆ.ಮುಂದಿನ ದಿನಗಳಲ್ಲಿ ವಿಕಲಚೇತನರ ಹಿತ ಕಾಯಲು ಬದ್ಧವಾಗಿದ್ದೇನೆ ಎಂದರು.



ವಿಕಲಚೇತನರು ತಮಗೆ ಕೊಟ್ಟಿರುವ ವಾಹನಗಳನ್ನು ದುರುಪಯೋಗ ಮಾಡಿಕೊಳ್ಳದೇ ಸ್ವಯಂ ಉದ್ಯೋಗಕ್ಕೆ ಬಳಸಿಕೊಂಡು ಜೀವನ ಕಟ್ಟಿಕೊಳ್ಳಬೇಕು. ಯಾರು ಸಹ ವಾಹನದ ಗಾಲಿಗಳನ್ನು ತೆಗೆಯಬಾರದು. ತೆಗೆದರೆ ಅಂತವರ ವಾಹನ ವಾಪಸ್ ಪಡೆಯಲಾಗುತ್ತದೆ. ನಿಮ್ಮ ಸುರಕ್ಷಿತೆ ದೃಷ್ಟಿಯಿಂದ ಗಾಲಿಗಳು ಹಾಕಿರುತ್ತಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಿಡಿಪಿಓ ಹರಿಪ್ರಸಾದ್ ,ಮಾಜಿ ಜಿ.ಪಂ.ಸದಸ್ಯ ಪ್ರಕಾಶ್ ಮೂರ್ತಿ, ಮಾಜಿ ತಾ.ಪಂ.ಅಧ್ಯಕ್ಷ ತಿಪ್ಪೇವಿಕಲಚೇತನ, ಮಾಜಿ ಸದಸ್ಯ ಗಿರಿಯಪ್ಪ, ನಗರಸಭೆ ಸದಸ್ಯ ರಾಘವೇಂದ್ರ, ಮುಖಂಡರಾದ ಮಂಜುನಾಥ, ರುದ್ರೇಶ್, ಪ್ರಕಾಶ್, ಮೂಡಲಗಿರಿಯಪ್ಪ, ಮಂಜುನಾಥ, ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಮತ್ತು ವಿಕಲಚೇತನ ಫಲಾನುಭವಿಗಳು ಉಪಸ್ಥಿತರಿದ್ದರು.



ಮಾಜಿ ಶಾಸಕಿ ಪೂರ್ಣಿಮಾ ಅವರು ಮುಖ್ಯಮಂತ್ರಿಗಳ ನಿವಾಸ ಕಾವೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಸಮ್ಮುಖದಲ್ಲಿ ಚರ್ಚೆ ನಡೆಸಿದರು. ಅ.20ಕ್ಕೆ ಕಾಂಗ್ರೆಸ್ ಸೇರ್ಪಡೆಗೊಳ್ಳಲಿದ್ದಾರೆ. ಈ ಸಂದರ್ಭದಲ್ಲಿ ಸಚಿವ ಬೈರತಿ ಸುರೇಶ್ ಉಪಸ್ಥಿತರಿದ್ದರು.

# ಲಾರಿ, ಕ್ರೂಷರ್ ಭೀಕರ ಅಪಘಾತ: ಏಳು ಮಂದಿ ಸಾವು

» ಹೊಸಪೇಟೆ

ತಾಲ್ಲೂಕಿನ ವ್ಯಾಸನಕೇರಿ ಟನಲ್ ಬಳಿ ಇಂದು ಮಧ್ಯಾಹ್ನ ಎರಡು ಲಾರಿ ಹಾಗೂ ಕ್ರೂಷರ್ ನಡುವೆ ಭೀಕರ ರಸ್ತೆ ಅಪಘಾತವಾಗಿದ್ದು, ಸ್ಥಳದಲ್ಲಿಯೇ ಏಳು ಜನ ಸಾವನಪ್ಪಿದ ಘಟನೆ ನಡೆದಿದೆ. ಘಟನಾ ಸ್ಥಳಕ್ಕೆ ಹೊಸಪೇಟೆ ಪೊಲೀಸರು ಹಾಗೂ ಸ್ಥಳೀಯರು ಸೇರಿಕೊಂಡು ಸ್ಥಳದಲ್ಲಿಯೇ ಮೃತಪಟ್ಟ ಏಳು ಜನರನ್ನು ಹಾಗೂ ತೀವ್ರ ಗಾಯಗೊಂಡವರನ್ನು ಹೊರತೆಗೆದು ಹೆಚ್ಚಿನ ಚಿಕಿತ್ಸೆಗೆ ಆಸ್ಪತ್ರೆಗೆ ದಾಖಲಿಸಿದರು. ಕ್ರೂಷರನಲ್ಲಿದ್ದವರು ಹರಪನಹಳ್ಳಿಯ ಕೂಲಹಳ್ಳಿ ಗೋಣಿಬಸವೇಶ್ವರ ದೇವಸ್ಥಾನಕ್ಕೆ ತೆರಳಿ ದರ್ಶನ ಪಡೆದು ಬರುವಾಗ ಈ ದುರ್ಘಟನೆ ನಡೆದಿದೆ. ಮೃತಪಟ್ಟವರನ್ನು ಚಾಲಕ ಅನಿಲ್ (30), ಉಮಾ (44), ಗೋಣಿಬಸಪ್ಪ (64), ಭಾಗ್ಯ (32), ಯುವರಾಜ(4), ಭೀಮಲಿಂಗ (50), ಕೆಂಚಮ್ಮ (80) ಇನ್ನೂಳಿದವರಿಗೆ ಗಂಭೀರ ಗಾಯಗಳಾಗಿದ್ದು, ಕ್ರೂಷರ್ ನಲ್ಲಿ ಒಟ್ಟು 13 ಜನರಿದ್ದರು.

### 12 ರುಂದು ಪೂರ್ವಭಾವಿ ಸಭೆ ಮುಂದಕ್ಕೆ

ಚಿತ್ರದುರ್ಗ: ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಿಸುವ ಸಂಬಂಧ ಅಗತ್ಯ ಪೂರ್ವ ಸಿದ್ಧತೆ ಕೈಗೊಳ್ಳುವ ಬಗ್ಗೆ ಚರ್ಚಿಸಲು ಅಕ್ಟೋಬರ್ 10ರಂದು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಅಧ್ಯಕ್ಷತೆಯಲ್ಲಿ ನಡೆಯಬೇಕಿದ್ದ ಪೂರ್ವಭಾವಿ ಸಭೆಯನ್ನು ಕಾರಣಾಂತರಗಳಿಂದ ಅಕ್ಟೋಬರ್ 12ರಂದು ಬೆಳಿಗ್ಗೆ 11ಕ್ಕೆ ಮುಂಡೂಡಲಾಗಿದೆ. ಎಲ್ಲ ಸಮಾಜದವರು ಸಭೆಗೆ ಹಾಜರಾಗಿ ಸಲಹೆ ನೀಡಬೇಕು ಎಂದು ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

# ಹಿಂದೂ ಮಹಾಗಣಪತಿ ಶೋಭಾಯಾತ್ರೆಯಲ್ಲಿ ಲೋಡ್‌ಗಟ್ಟಲೆ ಬಿದ್ದಿದ್ದ ಪ್ಲಾಸ್ಟಿಕ್ ತಟ್ಟೆ, ಕಪ್ ಸ್ವಚ್ಚತೆ



» ಚಿತ್ರದುರ್ಗ

ನಗರದಲ್ಲಿ ಭಾನುವಾರ ನಡೆದ ಹಿಂದೂ ಮಹಾಗಣಪತಿ ಬೃಹತ್ ಶೋಭಾಯಾತ್ರೆಯಲ್ಲಿ ಲಕ್ಷಾಂತರ ಜನ ಕುಣಿದು ಕುಪ್ಪಳಿಸಿದ ಪರಿಣಾಮ ಲೋಡ್‌ಗಟ್ಟಲೆ ಪೇಪರ್‌ಪ್ಲೇಟ್, ಕಪ್, ಕುಡಿಯುವ ನೀರಿನ ಪ್ಯಾಕೆಟ್, ಪ್ಲಾಸ್ಟಿಕ್ ಐಟಂಗಳು ಎಲ್ಲೆಂದರಲ್ಲಿ ರಾಶಿಗಟ್ಟಲೆ ಹರಡಿಕೊಂಡಿದ್ದವು.ಬೆಳಗಿನಿಂದಲೆ ನಗರಸಭೆಯ ಪೌರ ಕಾರ್ಮಿಕರು ನಗರದ ಮುಖ್ಯರಸ್ತೆಯಲ್ಲಿ ಬೇಕಾಬಿಟ್ಟಿ ಯಾಗಿ ಎಸೆಯಲಾಗಿದ್ದ ಪೇಪರ್ ಪ್ಲೇಟ್, ಕಪ್‌ಗಳನ್ನು ಗುಡಿಸಿ ಲಾರಿಗಳಲ್ಲಿ ಸುರಿದರು, ಗಣಪತಿ ಮೆರವಣಿಗೆಯಲ್ಲಿ ಪಾಲ್ಗೊಂಡು ಡಿಜೆ.ಸದ್ದಿಗೆ ಲಕ್ಷಾಂತರ ಭಕ್ತರು ಹೆಜ್ಜೆ ಹಾಕಿದ್ದರಿಂದ ರಾಶಿ ರಾಶಿಯಾಗಿ ಪಾದರಕ್ಷೆಗಳು ರಸ್ತೆಯಲ್ಲಿ ಬಿದ್ದಿದ್ದವು.ಮದಕರಿವೃತ್ತ, ಅಂಬೇಡ್ಕರ್ ವೃತ್ತ, ಎಸ್.ಬಿ.ಎಂ.ವೃತ್ತ, ಗಾಂಧಿವೃತ್ತ, ಸಂಗೊಳ್ಳಿರಾಯಣ್ಣ ವೃತ್ತ ಸೇರಿದಂತೆ ಹೊಳಲ್ಕೆರೆಯ ಕನಕವೃತ್ತದವರೆಗೂ ಅಲ್ಲಲ್ಲಿ ಭಕ್ತರಿಗೆ ಪ್ರಸಾದದ ವ್ಯವಸ್ಥೆ ಮಾಡಿದ್ದರಿಂದ ಲೋಡ್ ಲೆಕ್ಕದಲ್ಲಿ ಪೇಪರ್ ಪ್ಲೇಟ್, ಕಪ್‌ಗಳನ್ನು ಬಳಸಿ ಮನಸೋಇಚ್ಚೆ ಎಸೆಯಲಾಗಿತ್ತು. ನಗರಸಭೆ ಪೌರಾಯುಕ್ತರಾದ ರೇಣುಕರವರು ಬೆಳಿಗ್ಗೆಯ ಮುಖ್ಯರಸ್ತೆಯಲ್ಲಿ ಅಲ್ಲಲ್ಲಿ ನಿಂತು ಪೌರ ಕಾರ್ಮಿಕರು ಸ್ವಚ್ಚತೆಯಲ್ಲಿ ತೊಡಗಿದ್ದನ್ನು ವೀಕ್ಷಿಸಿದರು.




## ಫಾಸ್ಟ್ ನ್ಯೂಸ್

### ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ದಾವಣಗೆರೆ: ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ ಸೌಲಭ್ಯ ಪಡೆಯಲು ಸೇವಾ ಸಿಂಧು ತಂತ್ರಾಂಶದ ಮುಖಾಂತರ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ನಿಗಮದ ವೆಬ್‌ಸೈಟ್ www.dbcdc.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರು ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ದಾವಣಗೆರೆ ದೂ.ಸಂ 08192-230934 ಸಂಪರ್ಕಿಸಬಹುದು. ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಸಾತ್ವಿಕ ತಿಳಿಸಿದ್ದಾರೆ.

### ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ದಾವಣಗೆರೆ: ಕರ್ನಾಟಕ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ ಸೌಲಭ್ಯ ಪಡೆಯಲು ಸೇವಾ ಸಿಂಧು ತಂತ್ರಾಂಶದ ಮುಖಾಂತರ ಆನ್‌ಲೈನ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ನಿಗಮದ ವೆಬ್‌ಸೈಟ್ www.kvcdcl.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತ ದಾವಣಗೆರೆ ದೂ.ಸಂ 08192-230934 ಸಂಪರ್ಕಿಸಬಹುದು. ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಸಾತ್ವಿಕ ತಿಳಿಸಿದ್ದಾರೆ.

### ಉಪ್ಪಾರ ಸಮುದಾಯ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ದಾವಣಗೆರೆ: ಕರ್ನಾಟಕ ಉಪ್ಪಾರ ಸಮುದಾಯ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ ಸೌಲಭ್ಯ ಪಡೆಯಲು ಸೇವಾ ಸಿಂಧು ತಂತ್ರಾಂಶದ ಮುಖಾಂತರ ಆನ್‌ಲೈನ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್ 3 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ನಿಗಮದ ವೆಬ್‌ಸೈಟ್ https:upparadevelopment.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಉಪ್ಪಾರ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತ ದಾವಣಗೆರೆ ದೂ.ಸಂ 08192-230934 ಸಂಪರ್ಕಿಸಬಹುದು. ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಸಾತ್ವಿಕ ತಿಳಿಸಿದ್ದಾರೆ.

### ಮಡಿವಾಳ ಮಾಚಿದೇವ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ

ದಾವಣಗೆರೆ: ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ ಸೌಲಭ್ಯ ಪಡೆಯಲು ಸೇವಾ ಸಿಂಧು ತಂತ್ರಾಂಶದ ಮುಖಾಂತರ ಆನ್‌ಲೈನ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್ 3 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ನಿಗಮದ ವೆಬ್‌ಸೈಟ್ www.kmmd.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ ನಿಯಮಿತ ದಾವಣಗೆರೆ ದೂ.ಸಂ 08192-230934 ಸಂಪರ್ಕಿಸಬಹುದು. ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಸಾತ್ವಿಕ ತಿಳಿಸಿದ್ದಾರೆ.

### ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ

ಚಿತ್ರದುರ್ಗ: ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ತಾಲ್ಲೂಕು ಆರೋಗ್ಯಾಧಿಕಾರಿಗಳು ಹಾಗೂ ಶ್ರೀ ಗುರು ರಾಘವೇಂದ್ರ ವಿದ್ಯಾಸಂಸ್ಥೆ ಸಂಯುಕ್ತಾಶ್ರಯದಲ್ಲಿ ಇದೇ ಅಕ್ಟೋಬರ್ 10ರಂದು ಬೆಳಿಗ್ಗೆ 10ಕ್ಕೆ ನಗರದ ಕೋಟೆ ಮುಂಭಾಗದ ಶ್ರೀ ರಾಘವೇಂದ್ರ ವಿದ್ಯಾಸಂಸ್ಥೆಯಲ್ಲಿ "ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು ತಿಳಿಸಿದ್ದಾರೆ.

# ಕುಡಿತ ತ್ಯಜಿಸಲು ಮದ್ಯವರ್ಜನ ಶಿಬಿರ ಸಹಕಾರಿ

» **ಚಳ್ಳಕೆರೆ**

ಪ್ರತಿಯೊಬ್ಬರ ಜೀವನವು ಸಾರ್ಥಕಗೊಳ್ಳಬೇಕಾದರೆ ಎಲ್ಲಾ ದುಶ್ಚಟಗಳಿಂದ ದೂರವಿರಬೇಕಾಗುತ್ತದೆ. ವಿಶೇಷವಾಗಿ ಮದ್ಯಪಾನ ಮತ್ತು ದೂಮಪಾನ ವ್ಯಕ್ತಿಯ ಆರೋಗ್ಯಕ್ಕೆ ಕುತ್ತು ತರುವುದರಲ್ಲಿ ಯಾವುದೇ ಸಂದೇಹವಿಲ್ಲ. ಆದರೆ, ಇಂತಹ ಶಿಬಿರಗಳಲ್ಲಿ ಪಾಲ್ಗೊಂಡು ಕುಡಿತದಿಂದ ದೂರವಾಗಿ ಜನಮೆಚ್ಚುವ ಬದುಕನ್ನು ಆಯ್ಕೆ ಮಾಡಿಕೊಳ್ಳಬೇಕೆಂದು ಬಾಪೂಜಿ ಪದವಿ ಪೂರ್ವ ಕಾಲೇಜಿನ ಆಂಗ್ಲ ಉಪನ್ಯಾಸಕ ವೆಂಕಟೇಶ್‌ಮೂರ್ತಿ ತಿಳಿಸಿದರು.

ಅವರು, ನಗರದ ಜೈನ ಭವನದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಮ್ಮಿಕೊಂಡಿರುವ 1732ನೇ ಮದ್ಯವರ್ಜನ ಶಿಬಿರದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು. ಸಾಮಾನ್ಯವಾಗಿ ಕುಡಿತದಚಟಕ್ಕೆಒಳಗಾದವರುಮನೆಯಲ್ಲಿ



ಹೆಂಡತಿ ಸೇರಿದಂತೆ ಯಾರ ಮಾತನ್ನೂ ಕೇಳುವುದಿಲ್ಲ. ಅವರದೇಯಾದ ಸ್ವತಂತ್ರ್ಯ ಜೀವನವನ್ನು ನಡೆಸುತ್ತಾರೆ. ಕುಡಿದ ಮೇಲೆ ಅವರು, ಯಾರ ಮಾತನ್ನೂ ಕೇಳುವಷ್ಟು ಸಾವದಾನ ಅವರಲ್ಲಿ ಇರುವುದಿಲ್ಲ. ಅವರು, ತಮ್ಮದೇಯಾದ ಪ್ರಪಂಚದಲ್ಲಿ ಪ್ರಯಾಣ ನಡೆಸುತ್ತಾರೆ. ಆದರೆ, ಇಂತಹ ಚಟಕ್ಕೆ ಬಿದ್ದ ಜನರನ್ನು ಬದಲಾವಣೆಯತ್ತ ತರುವುದು ಕೇವಲ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜವಾಬ್ದಾರಿಯಲ್ಲ. ಇದಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು. ವಿಶೇಷವಾಗಿ ಕುಡಿತಕ್ಕೆ ಒಳಗಾದವರು ತಮ್ಮಭವಿಷ್ಯದಬದುಕಿನಹಿತದೃಷ್ಟಿಯಿಂದ ಕುಡಿತವನ್ನು ಕೈಬಿಡುವ ದೃಢಸಂಕಲ್ಪ ಮಾಡಬೇಕು ಎಂದರು.

ಎಂ.ಎನ್.ಮೃತ್ಯುಂಜಯ ಮಾತನಾಡಿ, ಪ್ರಸ್ತುತ ಶಿಬಿರದಲ್ಲಿ ನೂರಾರು ಜನರು ಈ ಚಟದಿಂದ ಹೊರಬರಲು ನಿರ್ಧರಿಸಿ ಶಿಬಿರಕ್ಕೆ ಸೇರ್ಪಡೆಯಾಗಿದ್ದಾರೆ. ಶಿಬಿರ ಆರಂಭವಾಗಿ ಆರು ದಿನಗಳು ಕಳೆದಿದ್ದು, ಎಲ್ಲರೂ ಈ ಚಟದಿಂದ ದೂರವಿರುವ ನಿರ್ಧಾರ ಕೈಗೊಂಡಿದ್ದಾರೆ. ಇಂತಹ ಶಿಬಿರಗಳಿಂದ ನೂರಾರು ಬಡಕುಟುಂಬಗಳು ನೋವಿನಿಂದ ಹೊರಬರುತ್ತವೆ ಎಂಬ ವಿಶ್ವಾಸ ನನ್ನದು ಎಂದರು. ನಗರಸಭಾ ಸದಸ್ಯರಾದ ಸುಜಾತಪಾಲಯ್ಯ, ಕವಿತಾಬೋರಯ್ಯ, ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ನೇತಾಜಿ ಪ್ರಸನ್ನ, ಉಪಾಧ್ಯಕ್ಷ ಓಬಣ್ಣ, ಎಂ.ಎನ್.ಮೃತ್ಯುಂಜಯ, ಸ್ವಾಸ್ಥ್ಯ ಸಂಕಲ್ಪ ತರಬೇತುದಾರ ತಿಪ್ಪೇಸ್ವಾಮಿ, ತಾಲ್ಲೂಕು ಯೋಜನಾಧಿಕಾರಿ ಶಶಿಕಲಾ, ಮೇಲ್ವಿಚಾರಕ ಅಶೋಕ್ ಉಪಸ್ಥಿತರಿದ್ದರು.

# ರೋಟರಿ ಮೊದಲಿನಿಂದಲೂ ಶಿಕ್ಷಣ, ಆರೋಗ್ಯಕ್ಕೆ ಪ್ರಾಮುಖ್ಯತೆ: ರವೀಂದ್ರ





» **ಚಿತ್ರದುರ್ಗ**

ರೋಟರಿ ಸಂಸ್ಥೆ ಮೊದಲಿನಿಂದಲೂ ಶಿಕ್ಷಣ ಮತ್ತು ಆರೋಗ್ಯಕ್ಕೆ ಪ್ರಾಮುಖ್ಯತೆ ನೀಡುತ್ತಾ ಬರುತ್ತಿದೆ ಎಂದು ರೊ.ಎಂ.ಕೆ.ರವೀಂದ್ರ ಹೇಳಿದರು.

ರೋಟರಿ ಕ್ಲಬ್ ಚಿತ್ರದುರ್ಗ ಫೋರ್ಟ್, ಇನ್ನರ್‌ವೀಲ್ ಕ್ಲಬ್ ಚಿತ್ರದುರ್ಗ ಫೋರ್ಟ್ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ತಾಲ್ಲೂಕಿನ ಗ್ರಾಮೀಣ ಭಾಗದ ಎಂಟನೆ ಹಾಗೂ ಹತ್ತನೆ ತರಗತಿ ವಿದ್ಯಾರ್ಥಿಗಳಿಗೆ ವಾಸವಿ ವಿದ್ಯಾಸಂಸ್ಥೆಯಲ್ಲಿ ಸೋಮವಾರ ಹಮ್ಮಿಕೊಳ್ಳಲಾಗಿದ್ದ ಎನ್.ಟಿ.ಎಸ್.ಇ. ಹಾಗೂ ಎನ್.ಎಂ.ಎಂ.ಎಸ್. ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಉದ್ಘಾಟಿಸಿ ಮಾತನಾಡಿದರು.

ಪೋಲಿಯೋ ನಿರ್ಮೂಲನೆಗಾಗಿ ಕಳೆದ 35 ವರ್ಷಗಳಿಂದಲೂರೋಟರಿಸಂಸ್ಥೆನಿರಂತರವಾಗಿ ಕೆಲಸ ಮಾಡುತ್ತ ಒಂದೊಂದು ಪೋಲಿಯೋ ಹನಿ ಲಸಿಕೆಗೂ ತಗಲುವ ವೆಚ್ಚವನ್ನು ಭರಿಸುತ್ತಿದೆ. ಸಾಮಾನ್ಯ ಶಾಲೆಯನ್ನು ಹ್ಯಾಪಿ ಸ್ಕೂಲ್ ಆಗಿ ಪರಿವರ್ತಿಸಿ ಶಿಕ್ಷಕರುಗಳಿಗೆ ತರಬೇತಿಯನ್ನು ನೀಡುವ ಮೂಲಕ ಅಗತ್ಯ ಸಲಕರಣೆಗಳನ್ನು ಪೂರೈಸುತ್ತಿದೆ. ಮಕ್ಕಳು ಶಿಕ್ಷಣದ ಕಡೆ ಗಮನ ಕೊಟ್ಟು ಕಲಿತಾಗ ಮುಂದೆ ಜೀವನದಲ್ಲಿ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬಹುದು. ಹಾಗಾಗಿ ತರಬೇತಿಯಲ್ಲಿ ಸಂಪನ್ಮೂಲ ವ್ಯಕ್ತಿಗಳು ಹೇಳುವ ವಿಷಯಗಳನ್ನು ಆಲಿಸುವಂತೆ ತಿಳಿಸಿದರು.

ಶಿಕ್ಷಣ ಇಲಾಖೆಯ ಇ.ಸಿ.ಓ. ನಾಗರಾಜ್ ಮಾತನಾಡುತ್ತ ಇಂತಹ ತರಬೇತಿಗಳಲ್ಲಿ ಗ್ರಾಮೀಣ ಪ್ರದೇಶದ ಮಕ್ಕಳು ಭಾಗವಹಿಸುವುದರಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಹೇಗೆ ಎದುರಿಸಬಹುದು ಎನ್ನುವ ಆತ್ಮಸ್ಥೈರ್ಯ ಮೂಡುತ್ತದೆ. ದೊಡ್ಡ ದೊಡ್ಡ ನಗರಗಳಲ್ಲಿ ಹಣ ನೀಡಿ ಸ್ಪರ್ಧಾತ್ಮಕ ಪರೀಕ್ಷಗಳಿಗೆ ತರಬೇತಿಗಳನ್ನು ಪಡೆಯಬೇಕಾಗುತ್ತದೆ. ಆದರೆ ಚಿತ್ರದುರ್ಗದಲ್ಲಿ ರೋಟರಿ ಸಂಸ್ಥೆ ಉಚಿತವಾಗಿ ಒದಗಿಸಿರುವ ತರಬೇತಿಯಲ್ಲಿ ಪಾಲ್ಗೊಂಡು ನಗರ ಪ್ರದೇಶಗಳ ಮಕ್ಕಳ ಜೊತೆ ಪೈಪೋಟಿ ನೀಡುವ ಸಾಮರ್ಥ್ಯ ಬೆಳೆಸಿಕೊಳ್ಳಿ ಎಂದು ಹೇಳಿದರು.

ಸ್ಪರ್ಧಾತ್ಮಕ ಯುಗವಾಗಿರುವುದರಿಂದ ಒಂದೊಂದು ಅಂಕಕ್ಕೂ ಮಹತ್ವವಿದೆ ಎನ್ನುವುದನ್ನು ಮಕ್ಕಳು ಗಮನದಲ್ಲಿಟ್ಟುಕೊಂಡು ಸಂಪನ್ಮೂಲ ವ್ಯಕ್ತಿಗಳು ತರಬೇತಿಯಲ್ಲಿ ಹೇಳುವ ವಿಚಾರಗಳನ್ನು ಶ್ರದ್ದೆಯಿಂದ ಕೇಳಿಸಿಕೊಳ್ಳಿ. ಶಾಲೆಯಲ್ಲಿ ಕಲಿತಿದ್ದನ್ನು ಸಂಜೆ ಮನೆಗೆ ಹೋದಾಗ ಪುನರಾವರ್ತನೆ ಮಾಡಿದರೆ ಮನಸ್ಸಿನಲ್ಲಿ ಉಳಿದು ಪರೀಕ್ಷೆಗೆ ಸುಲಭವಾಗಲಿದೆ ಎಂದರು.

ಬಿ.ಸಿ.ಆರ್.ಸಂಪತ್‌ಕುಮಾರ್, ನೋಡಲ್ ಆಫೀಸರ್ ವೇಣುಗೋಪಾಲ್, ರೋಟರಿ ಕ್ಲಬ್ ಚಿತ್ರದುರ್ಗ ಫೋರ್ಟ್ ಅಧ್ಯಕ್ಷ ರೊ. ಎಂ.ಗಿರೀಶ್, ಕಾರ್ಯದರ್ಶಿ ರೊ.ಶಶಿಧರ ಗುಪ್ತ, ಇನ್ನರ್‌ವೀಲ್ ಕ್ಲಬ್ ಚಿತ್ರದುರ್ಗ ಫೋರ್ಟ್ ಅಧ್ಯಕ್ಷೆ ಶ್ರೀಮತಿ ಸುಧಾ ಗೋವಿಂದರಾಜ್, ಕಾರ್ಯದರ್ಶಿ ನಂದಿನಿ ರಾಘವೇಂದ್ರ, ರೊ. ರಾಘವೇಂದ್ರ, ವಿಶೇಷ ಸಂಪನ್ಮೂಲ ವ್ಯಕ್ತಿ ಬೆಂಗಳೂರಿನ ಡಾ.ಪಿ.ಎಸ್.ರಾಘವೇಂದ್ರ, ಕಾರ್ಯಕ್ರಮದ ಸಂಚಾಲಕ ಟಿ.ಎನ್.ಮಾರುತಿ ಮೋಹನ್ ಈ ಸಂದರ್ಭದಲ್ಲಿದ್ದರು.

## ಶ್ರೀ ಸೋಮೇಶ್ವರ ವಿದ್ಯಾಲಯದಿಂದ ಧರ್ಮಸ್ಥಳದ ಅನ್ನ ದಾಸೋಹಕ್ಕೆ ದ್ವಿತೀಯ ವರ್ಷದ ಅಕ್ಕಿ ಸಮರ್ಪಣೆ



» **ದಾವಣಗೆರೆ**

ಮಾನವೀಯ ಮೌಲ್ಯ ಹಾಗೂ ಸಂಸ್ಕೃತಿ ಬಿತ್ತುವ ಕೆಲವೇ ಕೆಲವು ಶಾಲೆಗಳಲ್ಲಿ ಶ್ರೀಸೋಮೇಶ್ವರ ವಿದ್ಯಾಲಯ ಕೂಡ ಒಂದಾಗಿದೆ ಎಂದು ಪೂಜ್ಯ ಶ್ರೀ ಶಾರವೇಶಾನಂದ ಸ್ವಾಮಿ ಮಹಾರಾಜ್ ರವರು ತಿಳಿಸಿದರು. ಶ್ರೀ ಸೋಮೇಶ್ವರ ವಿದ್ಯಾಲಯದಿಂದ ಶ್ರೀ ಕ್ಷೇತ್ರ ಧರ್ಮಸ್ಥಳದ ಅನ್ನ ದಾಸೋಹಕ್ಕೆ ದ್ವಿತೀಯ ವರ್ಷದ ಅಕ್ಕಿ ಸಮರ್ಪಣೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಈ ವಿಷಯ ತಿಳಿಸಿದರು. ಇದೇವೇಳೆ ವಿವೇಕಾನಂದರ ಹಿತ ನುಡಿಗಳನ್ನ ಮಕ್ಕಳಿಗೆ ಹೇಳಿಕೊಡುವ ಮೂಲಕ ಅನ್ನದಾನದ ಶ್ರೇಷ್ಠತೆ ಹಾಗೂ ಅನ್ನದ ಮಹತ್ವ ಬಗ್ಗೆ ತಿಳಿಸಿದರು.

ಇಂಥ ಪುಣ್ಯದ ಕೆಲಸವನ್ನು ಮಾಡುತ್ತಿರುವ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಎಂ ಸುರೇಶ್ ಅವರ ಸೇವೆ ಅನನ್ಯ ಎಂದು ಬಣ್ಣಿಸಿ ಸನ್ಮಾನಿಸಿ ಗೌರವಿಸಿದರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಜಿ ಸಚಿವರಾದ ಎಸ್ ಎ ರವೀಂದ್ರನಾಥ್, ಮುಖ್ಯ ಅತಿಥಿಗಳಾಗಿ ಮಾಜಿ ಸರ್ಕಾರದ ಮುಖ್ಯ ಸಚೇತಕರಾದ ಡಾ.ಎ.ಹೆಚ್ ಶಿವಯೋಗಿಸ್ವಾಮಿ ಆಗಮಿಸಿದ್ದರು. ಈ ವೇಳೆ ಸಂಸ್ಥೆ ಅಧ್ಯಕ್ಷರಾದ ಅಶೋಕ್ ರೆಡ್ಡಿ, ಶ್ರೀಧರ್ ಮಹಾನಗರ ಪಾಲಿಕೆ ಸದಸ್ಯರಾದ ಕೆ.ಎಂ. ವಿರೇಶ್, ಪ್ರಾಚಾರ್ಯರು, ಮುಖ್ಯ ಶಿಕ್ಷಕರು, ಆಡಳಿತ ವರ್ಗ ಸೇರಿದಂತೆ ಶಾಲಾ ಶಿಕ್ಷಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಹಾಕಿ: ರಾಜ್ಯ ಮಟ್ಟಕ್ಕೆ ಚಿತ್ರದುರ್ಗ ತಂಡ ಆಯ್ಕೆ

» **ಚಿತ್ರದುರ್ಗ**

ಕಳೆದ 5 ರಂದು ಬೆಂಗಳೂರಿನಲ್ಲಿ ನಡೆದ ವಿಭಾಗ ಮಟ್ಟದ ಗ್ರಾಮಾಂತರ ಹಾಕಿ ಕ್ರೀಡಾಕೂಟದಲ್ಲಿ ಚಿತ್ರದುರ್ಗದ ತಂಡ 2-1 ಗೋಲ್‌ಗಳಿಂದ ರಾಮನಗರ ತಂಡವನ್ನು ಮಣಿಸಿ ಇದೇ ತಿಂಗಳ 11, 12, 13 ರಂದು ಮೈಸೂರಿನಲ್ಲಿ ನಡೆಯುವ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲಿದೆ ಎಂದು ಚಿತ್ರದುರ್ಗ ಹಾಕಿ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷ ಮಹಾಂತೇಶ್ ತಿಳಿಸಿದ್ದಾರೆ.



## ಪಿಹೆಚ್‌ಡಿ ಶಿಷ್ಯವೇತನಕ್ಕೆ ಅರ್ಜಿ

**ಚಿತ್ರದುರ್ಗ:** ರಾಜ್ಯ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು "ವಿಜ್ಞಾನ ಮತ್ತು ಇಂಜಿನಿಯರಿಂಗ್‌ನಲ್ಲಿ ಪಿಹೆಚ್.ಡಿ ಸಂಶೋಧನೆಗೆ ಕರ್ನಾಟಕ ಡಿ.ಎಸ್.ಟಿ-ಪಿಹೆಚ್.ಡಿ.ಶಿಷ್ಯ ವೇತನ" ಎಂಬ ಕಾರ್ಯಕ್ರಮವನ್ನು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ ಮುಖಾಂತರ ಅನುಷ್ಠಾನಗೊಳಿಸುತ್ತಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 30 ಕೊನೆ ದಿನ. ಹೆಚ್ಚಿನ ವಿವರಗಳಿಗಾಗಿ ಹಾಗೂ ಅರ್ಜಿ ಸಲ್ಲಿಸಲು http://ksteps.karnataka.gov.in ವೆಬ್‌ಸೈಟ್ ಸಂಪರ್ಕಿಸಬಹುದು ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಲಸಿಕೆ ವಂಚಿತರಿಗೆ ಲಸಿಕೆ ನೀಡಿ: ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್

# ಮಿಷನ್ ಇಂದ್ರಧನುಷ್ 5.0 3ನೇ ಸುತ್ತು ಯಶಸ್ವಿಗೊಳಿಸಿ

» **ಚಿತ್ರದುರ್ಗ**

ಮಿಷನ್ ಇಂದ್ರಧನುಷ್ 5.0 ಮೂರನೇ ಸುತ್ತನ್ನು ಯಶಸ್ವಿಯಾಗಿ ನಡೆಸಿ, ಲಸಿಕೆ ವಂಚಿತರಿಗೆ ಲಸಿಕೆ ನೀಡಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿದರು.

ಇಲ್ಲಿನ ನೆಹರು ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯ ಚೇಳುಗುಡ್ಡ ಮಾರಮ್ಮನ ದೇಗುಲದ ಆವರಣದಲ್ಲಿ ಸೋಮವಾರ ಮಿಷನ್ ಇಂದ್ರಧನುಷ್ 5.0 ಲಸಿಕಾ ಅಭಿಯಾನದ ಮೂರನೇ ಸುತ್ತಿನ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಲಸಿಕ ವಂಚಿತ ಗರ್ಭಿಣಿಯರು ಮಕ್ಕಳಿಗೆ ಲಸಿಕೆ ನೀಡಿ, ಜಿಲ್ಲೆಯ ಎಲ್ಲಾ ಗರ್ಭಿಣಿಯರಿಗೆ ಎಲ್ಲ ಮಕ್ಕಳಿಗೆ ಶೇ.100ರಷ್ಟು 12 ಮಾರಕ ರೋಗಗಳ ವಿರುದ್ಧ ಲಸಿಕೆಯನ್ನು ತಪ್ಪದೆ ನೀಡಿ ಮಿಷನ್ ಇಂದ್ರಧನುಷ್ 5.0 ಮೂರನೇ ಸುತ್ತು ಯಶಸ್ವಿಯಾಗಿ ನಡೆಸಿ ಎಂದರು. ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ



ಡಾ.ಅಭಿನವ ಮಾತನಾಡಿ, ಜಿಲ್ಲೆಯಲ್ಲಿ ಪರಿಣಾಮಕಾರಿ ಮಿಷನ್ ಇಂದ್ರಧನುಷ್ 5.0 ಮೂರನೇ ಸುತ್ತು ಕುರಿತಂತೆ ಮನೆ ಮನೆ ಸಮೀಕ್ಷೆ ನಡೆಸಿ ಕ್ರಿಯಾಯೋಜನೆ ತಯಾರಿಸಲಾಗಿದೆ. ಈ ಬಗ್ಗೆ ಜಿಲ್ಲಾ ಹಂತದಲ್ಲಿ ಹಾಗೂ ತಾಲ್ಲೂಕು ಹಂತದಲ್ಲಿ ತರಬೇತಿ ನೀಡಲಾಗಿದೆ. ಸೂಕ್ಷ್ಮ ಕ್ರಿಯಾ ಯೋಜನೆಯಂತೆ 825 ಗರ್ಭಿಣಿಯರು, 3416 ಮಂದಿ ಎರಡು ವರ್ಷದ ಒಳಗಿನ ಮಕ್ಕಳು, 620 ಮಂದಿ 2 ರಿಂದ 5 ವರ್ಷದ ಮಕ್ಕಳ ಗುರಿ ಹೊಂದಲಾಗಿದೆ ಎಂದರು.

ಮೂರನೇ ಸುತ್ತಿನ ಲಸಿಕಾ ಕಾರ್ಯಕ್ರಮವು ಇದೇ ಅಕ್ಟೋಬರ್ 9 ರಿಂದ 14 ರವರೆಗೆ ಆರು ದಿನಗಳ ಕಾಲ ಲಸಿಕೆ ನೀಡಲಾಗುವುದು ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ತಾಲ್ಲೂಕಿನಲ್ಲಿ ಇಂದು 28 ಲಸಿಕಾ ಸತ್ರಗಳು ಏಕಕಾಲದಲ್ಲಿ ನಡೆಯಲಿವೆ. ಫಲಾನುಭವಿ ಮಕ್ಕಳ ಮತ್ತು ಗರ್ಭಿಣಿಯರ ಲಸಿಕೆ ಪಡೆದ ದಾಖಲಾತಿಗಳನ್ನು ಯೂವಿನ್ ಪೋರ್ಟಲ್‌ನಲ್ಲಿ ದಾಖಲಿಸಲಾಗುತ್ತದೆ. ಎಲ್ಲರೂ ತಪ್ಪದೇ ನಿಮ್ಮ ಮಕ್ಕಳಿಗೆ ಲಸಿಕೆ ಕೊಡಿಸಿ ಎಂದರು. ಕಾರ್ಯಕ್ರಮದಲ್ಲಿ ನೆಹರು ನಗರ ಆರೋಗ್ಯ ಕೇಂದ್ರದ ಡಾ.ರಾಹುಲ್, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀಧರ್, ಗೋಪಿ, ಪುನೀತ್, ಆರೋಗ್ಯ ಸುರಕ್ಷತಾ ಅಧಿಕಾರಿ ಅರುಂಧತಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಫಲಾನುಭವಿ ಮಕ್ಕಳು ಗರ್ಭಿಣಿಯರು ಇದ್ದರು.

## ಫಾಸ್ಟ್ ನ್ಯೂಸ್

### ಮಹಿಳಾ ಉದ್ಯಮಾಕಾಂಕ್ಷಿಗಳಿಗೆ ಉದ್ಯಮಶೀಲತಾಭಿವೃದ್ಧಿ ತರಬೇತಿ ಶಿಬಿರ

» ದಾವಣಗೆರೆ

ನಗರದ ಆಂಜನೇಯ ಬಡಾವಣೆಯಲ್ಲಿರುವ ಯೋಗ ಮಂದಿರದಲ್ಲಿ ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿದ ಜಿಲ್ಲೆಯ ಆಸಕ್ತ ಮಹಿಳಾ ಉದ್ಯಮಾಕಾಂಕ್ಷಿಗಳಿಗೆ ಅಕ್ಟೋಬರ್ 25 ರಿಂದ ನವೆಂಬರ್ 3 ರವರೆಗೆ ಉದ್ಯಮಶೀಲತಾಭಿವೃದ್ಧಿ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ. ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಬೆಂಗಳೂರು ಇವರ ಪ್ರಾಯೋಜಕತ್ವದಲ್ಲಿ ಸಿಡಾಕ್(ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ, ಧಾರವಾಡ) ಸಂಸ್ಥೆಯಿಂದ ಈ ತರಬೇತಿ ಶಿಬಿರವನ್ನು ಆಯೋಜಿಸಲಾಗಿದ್ದು, ಶಿಬಿರದಲ್ಲಿ ಭಾಗವಹಿಸುವ ಅಭ್ಯರ್ಥಿಗಳು 18 ರಿಂದ 55 ವರ್ಷ ವಯೋಮಾನದವರಾಗಿರಬೇಕು.
ಅಭ್ಯರ್ಥಿಗಳು 2 ಪಾಸ್‌ಪೋರ್ಟ್ ಅಳತೆಯ ಫೋಟೋ ಹಾಗೂ ಆಧಾರ್ ಕಾರ್ಡ ಪ್ರತಿಯೊಂದಿಗೆ, ಜಂಟಿ ನಿರ್ದೇಶಕರ ಕಛೇರಿ, ಸಿಡಾಕ್, ಪ್ಲಾಟ್ ನಂ: 76ಎ–(ಪಿ1), ಕರೂರು ಕೈಗಾರಿಕಾ ಪ್ರದೇಶ, ಪಿ.ಬಿ. ರಸ್ತೆ, ದಾವಣಗೆರೆ. ತರಬೇತಿದಾರರಾದ ವಿನಯ ಜೆ.ಕೆ. ಮೊ.ಸಂ: 9886115200 ಹಾಗೂ ಬಸವರಾಜ ಜಿ. ಬಿ. ಮೊ.ಸಂ: 9164742033 ಸಂಪರ್ಕಿಸಲು ಸಿಡಾಕ್‌ನ ಜಿಲ್ಲಾ ಜಂಟಿ ನಿರ್ದೇಶಕರು ಆರ್.ಪಿ. ಪಾಟೀಲ್ ತಿಳಿಸಿದ್ದಾರೆ.

### ಎಂ.ಫಿಲ್ ಮತ್ತು ಪಿಹೆಚ್‌ಡಿ ಪದವಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತಸಾಲಿನಲ್ಲಿ ಎಂ.ಫಿಲ್ ಮತ್ತು ಪಿಎಚ್.ಡಿ ಪದವಿ ವ್ಯಾಸಂಗ ಮಾಡುತ್ತಿರುವ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಂದ ಫೆಲೋಶಿಪ್ ಪಡೆಯಲು ಆನ್‌ಲೈನ್ ಮೂಲಕ ಸೇವಾ ಸಿಂದು ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.35 ವರ್ಷ ವಯೋಮಾನದವರಾಗಿರಬೇಕು. ಅಭ್ಯರ್ಥಿಗಳು ಅಕ್ಟೋಬರ್ 30 ರೊಳಗಾಗಿ ಜಾಲತಾಣ https://sevasindhu.karnataka.gov.in/sevasindhu/departmentservices ಈ ಲಿಂಕ್ ಮೂಲಕ ಆನ್ ಲೈನ್‌ನಲ್ಲಿ ಒ.ಋುಟ ಮತ್ತು ಋ.ಜಗಳಲ್ಲಿ ಯಾವುದಾದರೂ ಒಂದು ಕೋರ್ಸ್ ಗೆ ಅರ್ಜಿ ಸಲ್ಲಿಸಿ, ಸಲ್ಲಿಸಿದ ಹಾರ್ಡ್ ಕಾಪಿಯನ್ನು ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಅಲ್ಪಸಂಖ್ಯಾತರ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಾಲತಾಣ https://dom.karnataka.gov.in ಸಂಪರ್ಕಿಸಲು ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಮಲ್ಲಿಕಾರ್ಜುನ್ ವಿ. ಮಠದ್ ತಿಳಿಸಿದ್ದಾರೆ.

### ಅ.16 ರಿಂದ ಉದ್ಯಮಶೀಲತಾ ತರಬೇತಿ ಕಾರ್ಯಕ್ರಮ

» ಚಿತ್ರದುರ್ಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಪ್ರಾಯೋಜಕತ್ವದಲ್ಲಿ ಸಿಡಾಕ್ (ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ, ಧಾರವಾಡ) ಸಂಸ್ಥೆಯಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಇಚ್ಛಿಸುವ ಚಿತ್ರದುರ್ಗ ಜಿಲ್ಲೆಯ ಪರಿಶಿಷ್ಟಪಂಗಡದ ಉದ್ಯಮಾಕಾಂಕ್ಷಿಗಳಿಗೆ ವಸತಿರಹಿತ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಇದೇ ಅಕ್ಟೋಬರ್ 16 ರಿಂದ 27 ರವರೆಗೆ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಸಂಘಟಿಸಲು ಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಉದ್ಯಮಶೀಲರ ಗುಣಲಕ್ಷಣಗಳು, ಸಾಮಾನ್ಯ ವ್ಯಕ್ತಿಯಿಂದ ಉದ್ಯಮಶೀಲ ವ್ಯಕ್ತಿಯಾಗಿ ಪರಿವರ್ತನೆಯಾಗಲು ಸಾಧನಾ ಪ್ರೇರಣ ತರಬೇತಿ, ಉದ್ಯಮ ಸ್ಥಾಪಿಸಲು ಅನುಸರಿಸಬೇಕಾದ ಮಜಲುಗಳು, ಉದ್ಯಮಾವಕಾಶಗಳ ಮಾಹಿತಿ, ಉದ್ಯಮ ಆಯ್ಕೆಯ ವಿಧಾನ, ಹಣಕಾಸು ನಿರ್ವಹಣೆ, ಮಾರುಕಟ್ಟೆ ನಿರ್ವಹಣೆ, ಲೆಕ್ಕಪತ್ರ ನಿರ್ವಹಣೆ, ಸಣ್ಣ ಉದ್ಯಮ ನಿರ್ವಹಣೆ ಇತ್ಯಾದಿ ವಿಷಯಗಳನ್ನು ಪರಿಣಿತ ಅತಿಥಿ ಬೋಧಕರಿಂದ ಉಪನ್ಯಾಸ ಏರ್ಪಡಿಸಲಾಗುವುದು. ಶಿಬಿರಾರ್ಥಿಗಳು ಉದ್ಯಮ ಪ್ರಾರಂಭಿಸಲು ಬೆಂಬಲಸೇವೆ ಒದಗಿಸಲಾಗುವದು. ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆದುಕೊಳ್ಳಲು ಆಸಕ್ತ 18 ರಿಂದ 55 ವರ್ಷ ವಯೋಮಿತಿಯ, 10ನೇ ತರಗತಿ ಪಾಸಾದ ಉದ್ಯಮಾಕಾಂಕ್ಷಿಗಳು "ಜಂಟಿ ನಿರ್ದೇಶಕರು, ಸಿಡಾಕ್ ರವರ ಕಛೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ, ಜೋಗಿಮಟ್ಟಿ ರಸ್ತೆ, ಚಿತ್ರದುರ್ಗ"ರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಲು ಕೋರಲಾಗಿದೆ.

ಮಾಹಿತಿಗಾಗಿ ಶ್ರೀ ವಿಜಯ ಕುಮಾರ ಪಿ. ಮೊಬೈಲ್ ಸಂಖ್ಯೆ: 7760270058 ತರಬೇತುದಾರರು, ಸಿಡಾಕ್, ಚಿತ್ರದುರ್ಗ ಇವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು. ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು 2 ಪಾಸ್‌ಪೋರ್ಟ್ ಅಳತೆಯ ಫೋಟೋ ಹಾಗೂ ಆಧಾರ್ ಕಾರ್ಡ್‌ನ ಪ್ರತಿಯೊಂದಿಗೆ ಸಂಪರ್ಕಿಸಲು ಕೋರಲಾಗಿದೆ.ಕಾರ್ಯಕ್ರಮವು ಉಚಿತವಾಗಿದ್ದು ತರಬೇತಿ ವೇಳೆಯಲ್ಲಿ ಊಟೋಪಚಾರ ಒದಗಿಸಲಾಗುವುದು. ಆಯ್ಕೆಯಾದ ಶಿಬಿರಾರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಪ್ರಯಾಣ ಮಾಡಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕಾಗುತ್ತದೆ ಎಂದು ಪ್ರಕಟಣೆ ತಿಳಿಸಿದೆ.

ರೈತ ಬಾಳೆಮಂಡಿ ರಾಮದಾಸ್ ಪ್ರಯತ್ನ

# ಚಳ್ಳಕೆರೆಯಲ್ಲಿ ಜೀವಾಮೃತ ಘಟಕ ಸ್ಥಾಪನೆ

» ಚಳ್ಳಕೆರೆ

ಕೃಷಿ ಕ್ಷೇತ್ರದಲ್ಲಿ ಸಾಕಷ್ಟು ಅನುಭವ ಹೊಂದಿರುವ ತಾಲ್ಲೂಕಿನ ಪ್ರಗತಿಪರ ರೈತರಲ್ಲಿ ಒಬ್ಬರಾದ ಬಾಳೆಮಂಡಿರಾಮದಾಸ್ ತಮ್ಮ ಜಮೀನಿನಲ್ಲಿ ಸುಮಾರು 50 ಸಾವಿರ ವೆಚ್ಚದ ಗುಜರಾತ್ ಮಾದರಿಯ ಜೀವಾಮೃತ ಘಟಕವನ್ನು ಸ್ಥಾಪಿಸುವ ಮೂಲಕ ಉತ್ತಮ ಬೆಳೆ ಬೆಳೆಯುವ ಕಾರ್ಯಕ್ಕೆ ಕೈಹಾಕಿದ್ದಾರೆ.

ತಾಲ್ಲೂಕಿನ ಬುಡ್ನಹಟ್ಟಿ ಗ್ರಾಮದ ತಮ್ಮ ತೋಟದಲ್ಲಿ ಅವರು, ಸಾಕಷ್ಟು ರೈತರಿಗೆ ಮಾಹಿತಿ ಪಡೆದು ಜಮೀನಿನಲ್ಲಿದ್ದ ಬೆಳೆಯೂ ಸಹ ಯಾವುದೇ ರೋಗಕ್ಕೆ ತುತ್ತಾಗದೆ ದಷ್ಟಪುಷ್ಟವಾಗಿ ಬೆಳೆಸುವ ದೃಷ್ಠಿಯಿಂದ ತಮ್ಮ ಜಮೀನಿನ ಬೆಳೆಗಳಿಗೆ ಜೀವಾಮೃತದ ಮೂಲಕ ಚೇತರಿಕೆಯನ್ನು ನೀಡಲು ಮುಂದಾಗಿದ್ದಾರೆ.

ಈ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿದ ರೈತ ಬಾಳೆಮಂಡಿರಾಮದಾಸ್, ಜೀವಾಮೃತ ಉತ್ಪಾದನೆಯಬಗ್ಗೆ ಸಾಕಷ್ಟು ಮಾಹಿತಿಯನ್ನು ಇಲಾಖೆ ಅಧಿಕಾರಿಗಳಿಂದ ಪಡೆದುಕೊಂಡ ನಂತರ ಗುಜರಾತ್‌ಗೆ ಭೇಟಿ ನೀಡಿ ಅಲ್ಲಿನ ಬಹುತೇಕ ರೈತರು ತಮ್ಮ ಬೆಳೆಯನ್ನು ರೋಗಗಳಿಂದ ರಕ್ಷಿಸಿಕೊಳ್ಳುವ ಜೊತೆಗೆ ಪೌಷ್ಠಿಕಾಂಶ





ಆಹಾರ ಬೆಳೆಯುವ ನಿಟ್ಟಿನಲ್ಲಿ ಜೀವಾಮೃತ ಉಪಯೋಗಿಸುತ್ತಿರುವುದು ಕಂಡುಬಂತು. ಅವರಿಂದ ಮಾಹಿತಿ ಪಡೆದಿದ್ದಲ್ಲದೆ, ಅಲ್ಲಿರುವ ಅನೇಕ ಘಟಕಗಳಿಗೆ ಭೇಟಿ ನೀಡಿ ನಮ್ಮಲ್ಲೂ ಸಹ ಜೀವಾಮೃತ ಘಟಕ ಪ್ರಾರಂಭಕ್ಕೆ ಯತ್ನಿಸಿದ್ದು ಅದು ಸಫಲವಾಗುವ ಹಂತದಲ್ಲಿದೆ ಎಂದರು.

ಸಾಮಾನ್ಯವಾಗಿ ನೀರಾವರಿ ಸೌಲಭ್ಯವುಳ್ಳ ಜಮೀನುಗಳಲ್ಲಿ ಜೀವಾಮೃತ ಘಟಕ ಸ್ಥಾಪಿಸುವುದು ಉತ್ತಮ ದೊಡ್ಡದಾದ ತೊಟ್ಟಿ ನಿರ್ಮಿಸಿ ಅದಕ್ಕೆ ಗುಜರಾತ್ ಮಾದರಿಯಲ್ಲಿ ಪೈಪ್ ಮತ್ತು ಟ್ಯೂಬ್ ಅಳವಡಿಸಿ ಬೆಲ್ಲ, ಗಂಜಲ, ಸಗಣಿ, ನುಗ್ಗೆ ಸೊಪ್ಪು, ಮಜ್ಜಿಗೆ ಮುಂತಾದವುಗಳನ್ನು ಟ್ಯೂಬ್‌ನಲ್ಲಿ ಹರಿಬಿಡಬೇಕು.

ಪ್ರಾರಂಭದಲ್ಲಿ ಒಂದು ವಾರದ ನಂತರ ಪೈಪ್ ಮೂಲಕ ಹಾಕಿದ ಎಲ್ಲಾ ವಸ್ತುಗಳು ದ್ರವರೂಪವಾಗಿ ಒಂದೆಡೆ ಶೇಖರಣೆಯಾಗುತ್ತದೆ. ಶೇಖರಣೆಯಾದ ದ್ರವವನ್ನು ಡ್ರಿಪ್ ಮೂಲಕ ಅಡಿಕೆ, ಬಾಳೆ, ತೆಂಗು, ಸಪೋಟ, ಕಾಫಿ, ಕಾಳುಮೆಣಸು ಬೆಳೆಗಳಿಗೆ ಹಾಯಿಸಲಾಗುವುದು. ಇದರಿಂದ ಬೆಳೆಗಳು ಸಮೃದ್ಧವಾಗಿ ಬೆಳೆಯುತ್ತವೆ. ಇದೇ ಮೊದಲ ಬಾರಿಗೆ ನಮ್ಮ ಜಮೀನಿನಲ್ಲಿ ಈ ಪ್ರಯೋಗ ಮಾಡಿದ್ದು, ಹಲವಾರು ರೈತರು ಭೇಟಿ ನೀಡಿ ಮಾಹಿತಿ ಪಡೆದಿದ್ದಾರೆಂದರು.

ಬೃಹದಾಕಾರದ ತೊಟ್ಟಿ ಸಿದ್ದಪಡಿಸಿದ್ದು, ಅದರಿಂದ ದ್ರವ ಪೈಪ್ ಮೂಲಕ ಬೆಳೆಗಳಿಗೆ ಸಿಂಪಡಣೆಯಾದರೆ, ಟ್ಯೂಬ್‌ನಲ್ಲಿ ಗೋಬರ್ ಗ್ಯಾಸ್ ಸಹ ಉತ್ಪತ್ತಿಯಾಗುತ್ತದೆ. ಒಂದು ಕಾರ್ಯದಲ್ಲಿ ಎರಡು ಕೆಲಸ ಮಾಡುವ ಪ್ರಯೋಗ ಇದಾಗಿದೆ. ರೈತರು ಇದರ ಸದುಪಯೋಗವನ್ನು ಪಡೆದುಕೊಂಡಲ್ಲಿ ಉತ್ತಮ ಆರ್ಥಿಕ ಲಾಭ ಗಳಿಸಲು ಸಾಧ್ಯವಾಗುತ್ತದೆ ಎಂದರು.

# ರಸ್ತೆ ಮಧ್ಯಭಾಗದಲ್ಲಿ ಡಿವೈಡರ್‌ಗಳ ಮೇಲೆ ಬೆಳೆಸಲಾಗಿದ್ದ ಅಲಂಕಾರಿಕ ಹೂವಿನ ಗಿಡ ನಾಶ

» ಚಿತ್ರದುರ್ಗ

ವಿಶ್ವಹಿಂದೂ ಪರಿಷತ್ ಹಾಗೂ ಬಜರಂಗದಳದಿಂದ ಪ್ರತಿಷ್ಠಾಪಿಸಲಾಗಿದ್ದ ಹಿಂದೂ ಮಹಾಗಣಪತಿಯ ಬೃಹತ್ ಶೋಭಾಯಾತ್ರೆಯಲ್ಲಿ ಕುಣಿದು ಕುಪ್ಪಳಿಸುವುದಕ್ಕಾಗಿಯೇ ಲಕ್ಷಾಂತರ ಭಕ್ತರು ನಗರಕ್ಕೆ ಆಗಮಿಸಿದ್ದು ಒಂದು ಕಡೆಯಾದರೆ ಮತ್ತೊಂದಡೆ ರಸ್ತೆ ಮಧ್ಯಭಾಗದಲ್ಲಿ ಅಳವಡಿಸಲಾಗಿರುವ ಡಿವೈಡರ್‌ಗಳ ಮೇಲೆ ಉದ್ದಕ್ಕೂ ಸಾವಿರಾರು ಜನ ನಿಂತಿದ್ದರಿಂದ ಅಲಂಕಾರಿಕ ಹೂವಿನ ಗಿಡಗಳು ಒಂದು ಉಳಿದಿಲ್ಲ. ಎಲ್ಲವೂ ನಾಶವಾಗಿರುವುದು ಪರಿಸರ ಪ್ರಿಯರಿಗೆ ಅಪಾರವಾದ ನೋವುಂಟಾಗಿದೆ.

ಸ್ಟೇಡಿಯಂದ ಮುಂಭಾ ಗದಿಂದ ಹಿಡಿದು ಹೊಳಲ್ಕೆರೆ ರಸ್ತೆಯಲ್ಲಿರುವ ಸಂಗೊಳ್ಳಿರಾಯಣ್ಣ ವೃತ್ತದ ವರೆಗೂ ರಸ್ತೆ ವಿಭಜಕಗಳ ಮೇಲೆ ಕಂಗೊಳಿಸುತ್ತಿದ್ದ ಬಣ್ಣ ಬಣ್ಣದ ಹೂವಿನ ಅಲಂಕಾರಿಕ ಗಿಡಗಳು ನೋಡಲು ಒಂದು ಉಳಿದಿಲ್ಲ. ದಿನನಿತ್ಯವು ಬೆಳಗಿನ ಜಾವ ನೀರು ಹಾಯಿಸಿ ಕಾಪಾಡಿದ್ದ ನಗರಸಭೆಯವರು ಕಂಡು ಮಮ್ಮಲ ಮರುಗಿದರು. ಬೆಂಗಳೂರಿನ ಲಾಲ್‌ಬಾಗ್‌ನಿಂದ ತರಿ ಸಲಾಗಿದ್ದ ಅಲಂಕಾರಿಕ ಹೂವಿನ ಗಿಡಗಳಿಗೆ ಒಂದರಿಂದ ಎರಡು ಕೋಟಿ ರೂ.ಗಳಾಗಿರಬಹುದೆಂದು ಅಂದಾಜಿಸಲಾಗಿದೆ.



# ಅ.11ರಂದು ಅಂತರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣ ಆಯೋಗ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಹೊಳಲ್ಕೆರೆ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಇದೇ ಅಕ್ಟೋಬರ್ 11ರಂದು ಬೆಳಿಗ್ಗೆ 10ಕ್ಕೆ ಹೊಳಲ್ಕೆರೆ ಸಂವಿಧಾನ ಸೌಧದಲ್ಲಿ "ಅಂತರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ ಹಾಗೂ ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ ಕುರಿತು ಬಾಲ್ಯ ವಿವಾಹ ನಿಷೇದಾಧಿಕಾರಿಗಳಿಗೆ ಕಾರ್ಯಾಗಾರ" ಹಮ್ಮಿಕೊಳ್ಳಲಾಗಿದೆ.
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎಸ್.ರೇಖಾ ಕಾರ್ಯಕ್ರಮ ಉದ್ಘಾಟಿಸುವರು. ಹೊಳಲ್ಕೆರೆ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಸ್.ಸರವಣನ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್. ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಧರ್ಮೇಂದರ್ ಕುಮಾರ್ ಮೀನಾ, ಪ್ರಧಾನ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರಾದ ಎಂ.ಪಿ.ಉಮೇಶ್, ಅಪರ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರಾದ ನಿರುಪಮ ರೇಣಕಪ್ಪ ಢಂಗ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಡಾ.ಆರ್.ಪ್ರಭಾಕರ, ಹೊಳಲ್ಕೆರೆ ವಕೀಲರ ಸಂಘದ ಅಧ್ಯಕ್ಷ ಎಲ್. ಕೆ.ಶಿವಕುಮಾರ್, ಉಪಾಧ್ಯಕ್ಷ ಹೆಚ್.ರಮೇಶ್, ಕಾರ್ಯದರ್ಶಿ ಸಿದ್ದೇಶ್, ಡಿಹೆಚ್‌ಓ ಡಾ.ರೇಣುಪ್ರಸಾದ್, ಡಿಡಿಪಿಐ ಕೆ.ರವಿಶಂಕರ್ ರೆಡ್ಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿದೇಶಕಿ ಭಾರತಿ ಆರ್ ಬಣಕಾರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಪೊಲೀಸ್ ಉಪಾಧೀಕ್ಷಕ ಅನಿಲ್ ಕುಮಾರ್, ಬಾಲನ್ಯಾಯಾ ಮಂಡಳಿ ಸದಸ್ಯರಾದ ಮಧುಕರ್, ಸುಮನ ಎಸ್.ಅಂಗಡಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ, ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ, ಇಒ ಹೆಚ್.ಹನುಮಂತಪ್ಪ ಭಾಗವಹಿಸುವರು.



# ಹೇರೂರು ಬಳಿ ಟೋಲ್: ರೈತ ಸಂಘ ವಿರೋಧ

» ಹೊಸದುರ್ಗ



ಹೆದ್ದಾರಿ ಪ್ರಾಧಿಕಾರದ ಎಇಇ ನರೇಂದ್ರ ಅವರು ಪಟ್ಟಣದ ಪುರಸಭೆಯಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ' ಹೊಳಲ್ಕೆರೆ ರಸ್ತೆಯ ಹೇರೂರು ಬಳಿ ಟೋಲ್ ಗೇಟ್ ಮಾಡಬೇಕೆಂದು ಪ್ರಸ್ತಾಪಿಸಿದ್ದರು.ಈ ಭಾಗದ ರೈತರು ಭೂಮಿ ನೀಡುತ್ತಿಲ್ಲ, ಅವರ ಮನವೊಲಿಸಿ ಭೂಮಿ ಕೊಡಿಸಿ ಎಂದು ಮನವಿ ಮಾಡುತ್ತಾರೆ. ಇದನ್ನು ರೈತ ಸಂಘ ವಿರೋಧಿಸುತ್ತಿದೆ ಎದು ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ಧವೀರಪ್ಪ ತಿಳಿಸಿದರು.

ಈ ಕುರಿತು ರೈತ ಸಂಘದ ಕಛೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಡಿದ ಅವರು ಈ ಬಾರಿ ಮಳಿಯಿಲ್ಲದೆ ಬೇರೆ, ಕಳೆದ ಬಾರಿ ಮಳೆ ಜಾಸ್ತಿ ಬರ, ಈ ಸಂದರ್ಭದಲ್ಲಿ ರೈತರ ಕಾಳಜಿ ವಹಿಸಬೇಕಿದ್ದ ಶಾಸಕರು ಹೆದ್ದಾರಿಯಲ್ಲಿ ತಿರುಗಾಡುವ ನಾಗರೀಕ ಜೇಬು ಖಾಲಿ ಮಾಡುವ ಹುನ್ನಾರ ಸರಿಯಿಲ್ಲ. ಟೋಲ್ ಮಾಡುವ ಮೂಲಕ ನಿರ್ಭಯವಾಗಿ ಓಡಾಡುವ ಇಚ್ಚೆ ಧಮನ ಮಾಡಿದ್ದಾರೆ. ಟೋಲ್ ಬಳಿ ಮೂಲಸೌಕರ್ಯಗಳನ್ನು ಒದಗಿಸಲಾಗಿದಿಯಾ?. ರಸ್ತೆ ಮೈಟೇನೆನ್ಸ ಆಗಿದಿಯಾ. ರಸ್ತೆ ನಿರ್ಮಾಣ ಹಂತದಲ್ಲಿರುವಾಗಲೇ ಟೋಲ್ ಮಾಡಲು ರೈತರಿಂದ ಭೂಮಿ ಕೊಡಿಸಿ ಎನ್ನುವುದು. ಸರಿಯಿಲ್ಲ.

ಜಿಲ್ಲಾ ವ್ಯಾಪ್ತಿಯಲ್ಲಿ ಹಾಕೋದನ್ನ ವಿರೋಧ ಮಾಡುತ್ತಿದೆ. ವಾಹನ ಬಳಕೆದಾರರಿಗೆ ದೊಡ್ಡ ಮೊತ್ತದ, ಟೋಲ್ ನಿಷೇಧ ಮಾಡಿ, ತೆರಿಗೆ ಕಟ್ಟಿಸಿಕೊಳ್ಳಿ, ಲೈಫ್ ಟ್ಯಾಕ್ಸ್ ಮೇಲೆ ಗಾಡಿ ಓಡಲಿ. ಎರಡು ಹಗಲಿನ ಕತ್ತಿಯಿಂದ ಶೋಷಣೆ ಸರಿಯಲ್ಲ. ಇದನ್ನು ನಿಷೇಧಿಸಬೇಕು. ನರೇಂದ್ರ ಜವಾಬ್ದಾರಿ ಯುತಿ ಕೆಲಸ ತೋರಿಸಿ, ನಿಯಮಾವಳಿಗಳನ್ನು ಪಾಲಿಸುತ್ತಿದ್ದಾರೆ. ಬೋರ್ಡ್ ಹಾಕಿಸಿ, ನಂತರ ಟೋಲ್ ಹಾಕ್ಸಿ.ಶಾಸಕರು ಜನಪರ ಕಾಳಜಿ ಇದ್ದರೆ ತೆರಿಗೆ ನಿಲ್ಲಿಸಿ, ಶೋಷಣೆ ಮಾಡಲು ಹೊರಟಿದ್ದಾರೆ. ರೈತ ಸಂಘ ಟೋಲ್ ಹಾಕಲು ಅವಕಾಶ ಕೊಡಲಾಗುವುದಿಲ್ಲ. ಹಣದ ಆಸೆ ತೋರಿಸಿ, ರೈತರನ್ನು ಬೀದಿಪಾಲು ಮಾಡಿದ್ದಾರೆ ಎಂದರು.

## ಪ್ರಮುಖ ಸುದ್ದಿ

# ನಿರುದ್ಯೋಗ ಸಮಸ್ಯೆ ನಿವಾರಣೆಗೆ ಸ್ವಯಂ ಉದ್ಯಮ ಪರಿಹಾರ

» ಚಿತ್ರದುರ್ಗ

ಜನಸಂಖ್ಯಾಸ್ಪೋಟ ಹಾಗೂ ಅದರಿಂದ ಉಂಟಾಗುದ ನಿರುದ್ಯೋಗ ಸಮಸ್ಯೆ ನಿವಾರಣೆಗಾಗಿ ಸ್ವಯಂ ಉದ್ಯಮ ಸ್ಥಾಪನೆ ಪರಿಹಾರವಾಗಬಹುದು ಎಂದು ಸರ್ಕಾರ ಉದ್ಯಮ ಶೀಲತಾ ತರಬೇತಿ ಕಾರ್ಯಕ್ರಮಗಳನ್ನು ಪ್ರಾಯೋಜಿಸುತ್ತದೆ ಎಂದು ಸಿಡಾಕ್ ಜಂಟಿ ನೇಶಕ ಆರ್.ಪಿ.ಪಾಟೀಲ್ ಹೇಳಿದರು. ಮೊಳಕಾಲ್ಮುರು ತಾಲ್ಲೂಕಿನ ಬಿ.ಜಿ.ಕೆರೆಯ ಮಾರುತಿ ಶಿಕ್ಷಣ ಮತ್ತು ಗ್ರಾಮೀಣ ಅಭಿವೃದ್ಧಿ ಸೊಸೈಟಿಯಲ್ಲಿ ಈಚೆಗೆ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ಸಂಯುಕ್ತಾಶ್ರಯದಲ್ಲಿ ಪರಿಶಿಷ್ಟಜಾತಿ, ವರ್ಗದವರಿಗೆ "ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರ"ದ ಉದ್ಘಾಟಿಸಿ ಅವರು ಮಾತನಾಡಿದರು. ಕರ್ನಾಟಕ ರಾಜ್ಯದಾದ್ಯಂತ ಉದ್ಯಮಶೀಲತೆಯನ್ನು ಅಭಿವೃದ್ಧಿಪಡಿಸಲು ಸರ್ಕಾರದಿಂದ ಸ್ಥಾಪಿವಾಗಿರುವ ಸಿಡಾಕ್ (ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ),



ಸಂಸ್ಥೆಯು "ಉದ್ಯಮಶೀಲತೆಯು ಹುಟ್ಟಿನಿಂದ ಮಾತ್ರ ಬರಬೇಕಾಗಿಲ್ಲ, ತರಬೇತಿಯ ಮೂಲಕ ಸಾಮಾನ್ಯ ಜನರಲ್ಲೂ ಉದ್ಯಮಶೀಲತೆಯನ್ನು ಉದ್ದೀಪನೆಗೊಳಿಸಬಹುದು" ಎಂಬ ತತ್ವದೊಂದಿಗೆ ಕಾರ್ಯನಿರ್ವಹಿಸುತ್ತಿದೆ. ಇಂದಿನ ಕಾರ್ಯಕ್ರಮದಲ್ಲಿ ಉದ್ಯಮಶೀಲತೆ ಎಂದರೇನು, ಮಹಿಳೆಯರಿಗಾಗಿ ಇರುವ ಉದ್ಯಮಾವಕಾಶಗಳ ಮಾಹಿತಿ, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸ್ವಯಂ ಉದ್ಯಮ ಸ್ಥಾಪಿಸಲು ಸಹಕರಿಸುವ ಯೋಜನೆಗಳ ಮಾಹಿತಿ, ಸಮರ್ಪಕ ಮಾಹಿತಿಗಾಗಿ ಸಂಪರ್ಕಿಸಬೇಕಾದ ಇಲಾಖೆಗಳ ಮಾಹಿತಿಯನ್ನು ಪರಿಣಿತ ಅತಿಥಿ ಭೋಧಕರಾದ ಶ್ರೀ ಪ್ರಶಾಂತಕುಮಾರ ಎಂ.ಎಸ್ ಅವರು ನೀಡಲಿದ್ದಾರೆ. ಈ ತರಬೇತಿಯಲ್ಲಿ ಆಸಕ್ತಿಯಿಂದ ಭಾಗವಹಿಸಿ ಸದುಪಯೋಗ ಪಡಿಸಿಕೊಳ್ಳಿ ಎಂದು ತಿಳಿಸುತ್ತಾ ನಿಮ್ಮ ಜೀವನದಲ್ಲಿ ಕಂಡ ಕನಸುಗಳು ನನಸಾಗಲಿ, ನೀವು ಯಶಸ್ವಿ ಉದ್ಯಮಶೀಲರಾಗಿ, ಆರ್ಥಿಕವಾಗಿ ಸಬಲರಾಗಿ ರಾಷ್ಟ್ರದ ಆರ್ಥಿಕತೆಗೆ ಕೊಡುವಂತಾಗಲಿ ಎಂದು ಹಾರೈಸಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಾಯಕ ನಿರ್ದೇಶಕರು ಹಾಗೂ ಸಂಪನ್ಮೂಲ ವ್ಯಕ್ತಿ ಎಂ.ಎಸ್.ಪ್ರಶಾಂತ್‌ಕುಮಾರ್ ಮಾತನಾಡಿ, ತರಬೇತಿಯಲ್ಲಿ ಉದ್ಯಮಶೀಲರ ಗುಣಲಕ್ಷಣಗಳನ್ನು ಯಾವ ರೀತಿಯಲ್ಲಿ ಅಳವಡಿಸಿಕೊಳ್ಳಬೇಕು, ಉದ್ಯಮವನ್ನ ಯಾವ ರೀತಿಯಲ್ಲಿ ಪ್ರಾರಂಭಿಸಬೇಕು, ಉದ್ಯಮ ಆರಂಭಿಸಲು ಇರುವಂತಹ ಅವಕಾಶಗಳನ್ನ ಗುರುತಿಸುವುದು ಹೇಗೆ, ಸವಾಲುಗಳನ್ನು ಎದುರಿಸುವ ಬಗೆ, ಸರ್ಕಾರಿ ಯೋಜನೆಗಳ ಮತ್ತು ವಿವಿಧ ಇಲಾಖೆಗಳ ಕುರಿತು ಮಾಹಿತಿ ನೀಡುವುದರ ಜೊತೆಗೆ ಯಾವ ರೀತಿಯಲ್ಲಿ ಪಡೆದುಕೊಳ್ಳುವ ಹಂತಗಳ ಬಗ್ಗೆ ತಿಳಿಸಿದರು.

ಬಿ.ಜಿ.ಕೆರೆಯ ಮಾರುತಿ ಶಿಕ್ಷಣ ಮತ್ತು ಗ್ರಾಮೀಣ ಅಭಿವೃದ್ಧಿ ಸೊಸೈಟಿ ಕಾರ್ಯದರ್ಶಿ ಟಿ.ಚಂದ್ರಪ್ಪ ಮಾತನಾಡಿ, ಸಿಡಾಕ್ ಸಂಸ್ಥೆಯು ಉದ್ಯಮಶೀಲತೆ ಕಾರ್ಯಕ್ರಮಗಳನ್ನು ನಿರಂತರವಾಗಿ ಸಂಘಟಿಸುತ್ತಿರುವುದಕ್ಕೆ ಸಿಡಾಕ್‌ಗೆ ಅಭಿನಂದನೆ ತಿಳಿಸಿದ ಅವರು, ಪರಿಶಿಷ್ಟಜಾತಿ, ವರ್ಗದವರಿಗೆ ಸ್ವಾವಲಂಬಿಯಾಗಿ ಜೀವನನಡೆಸಲು ಅನೇಕ ರೀತಿಯ ಉದ್ಯೋಗಾವಕಾಶಗಳಿರುತ್ತವೆ. ಅವುಗಳನ್ನು ಉಪಯೋಗಿಸಿಕೊಳ್ಳಬೇಕು. ಅದಲ್ಲದೆ ಸ್ವಯಂ ಉದ್ಯಮಕ್ಕೆ ನಾನಾ ರೀತಿಯಲ್ಲಿವೆ ಉದಾ: ರೊಟ್ಟಿ ತಯಾರಿಕೆ, ಟೈಲರಿಂಗ್, ತರಕಾರಿ ವ್ಯಾಪಾರ, ಬಟ್ಟೆ ವ್ಯಾಪಾರ ಇನ್ನಿತರೆ ವ್ಯವಹಾರಗಳನ್ನು ಮಾಡುವ ಮೂಲಕ ಜೀವನ ನಿರ್ವಹಣೆ ಮಾಡಬಹುದು ಎಂದರು.

ತಿಳುವಳಿಕೆ ಶಿಬಿರದಲ್ಲಿ ಉದ್ಯಮಶೀಲತೆ ತಿಳುವಳಿಕೆ ಪಡೆದಲ್ಲಿ ಸ್ವಯಂ ಉದ್ಯಮವನ್ನು ಸ್ಥಾಪಿಸಿ ಅವರು ತಮ್ಮ ಕುಟುಂಬದ ಆರ್ಥಿಕ ಮಟ್ಟವನ್ನು ಸುಧಾರಿಸಲು ಸಹಾಯವಾಗುತ್ತದೆ. ಅಲ್ಲದೆ ಈ ತರಹದ ತರಬೇತಿಗಳಲ್ಲಿ ಹೆಚ್ಚಿನ ಆಸಕ್ತಿಯಿಂದ ಭಾಗವಹಿಸಿ ತರಬೇತಿಯಲ್ಲಿ ಭೋಧಿಸುವ ವಿಷಯಗಳನ್ನು ತಿಳಿದುಕೊಂಡು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಯಶಸ್ಸುಗಳಿಸಲು ಸಾಧ್ಯ ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಸರ್ಕಾರದಿಂದ ಪರಿಶಿಷ್ಟ ಜಾತಿ, ವರ್ಗದವರಿಗೆ ಉದ್ಯಮಿಗಳಿಗೆ ಅನೇಕ ರೀತಿಯ ಸಹಾಯಧನದ ಯೋಜನೆಗಳು ಲಭ್ಯವಿದ್ದು ಅವುಗಳ ಸದುಪಯೋಗ ಪಡೆದುಕೊಳ್ಳಿ ಎಂದು ಶಿಬಿರಾರ್ಥಿಗಳನ್ನ ಉತ್ತೇಜಿಸಿದರು.

## ಫಾಸ್ಟ್ ನ್ಯೂಸ್

### ಅ. 10 ರಂದು ಕಂದಾಯ ಸಚಿವರಿಂದ ಪ್ರಗತಿ ಪರಿಶೀಲನಾ ಸಭೆ

» ಚಿತ್ರದುರ್ಗ

ರಾಜ್ಯ ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರ ಅಧ್ಯಕ್ಷತೆಯಲ್ಲಿ ಕಂದಾಯ ಇಲಾಖೆಯ ವಿವಿಧ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ಅ. 10 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ. ಸಭೆಯಲ್ಲಿ ಕಂದಾಯ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು (ವಿಪತ್ತು ನಿರ್ವಹಣೆ), ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಇಓ, ಅಪರ ಜಿಲ್ಲಾಧಿಕಾರಿಗಳು, ಉಪವಿಭಾಗಾಧಿಕಾರಿಗಳು, ತಹಸಿಲ್ದಾ ರರು, ಭೂದಾಖಲೆಗಳ ಉಪನಿರ್ದೇಶಕರು ಹಾಗೂ ಸಹಾಯಕ ನಿರ್ದೇಶಕರು, ಜಿಲ್ಲಾ ನೊಂದಣಾಧಿಕಾರಿಗಳು, ಉಪ ನೊಂದಣಾಧಿಕಾರಿಗಳು, ಉಪತಹಸಿಲ್ದಾರ್/ಶಿರಸ್ತೆದಾರರು, ಕಂದಾಯ ನಿರೀಕ್ಷಕರು, ಭೂಮಾಪಕರು, ಗ್ರಾಮ ಆಡಳಿತ ಅಧಿಕಾರಿಗಳು ಭಾಗವಹಿಸುವರು.ಸಭೆಯಲ್ಲಿ ಜಿಲ್ಲೆಯಲ್ಲಿನ ವಿಪತ್ತು ನಿರ್ವಹಣೆ, ಇ–ಆಫೀಸ್ ಅನುಷ್ಠಾನ, ಕೆರೆಗಳ ಒತ್ತುವರಿ ವಿವರ, ಭೂಪರಿವರ್ತನೆ, ತಹಸಿಲ್ದಾರ್, ಉಪವಿಭಾಗಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿನ ಪ್ರಕರಣಗಳ ವಿಲೇವಾರಿ ಬಾಕಿ, 94ಸಿ ಮತ್ತು 94 ಸಿಸಿ ಸ್ಥಿತಿಗತಿ, ನೊಂದಣಿ ಮತ್ತು ಮುದ್ರಾಂಕ ಇಲಾಖಾ ವಿಷಯಗಳು, ಹೊಸ ಕಂದಾಯ ಗ್ರಾಮಗಳ ಘೋಷಣೆ ಸೇರಿದಂತೆ ಕಂದಾಯ ಇಲಾಖೆಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಪ್ರಗತಿ ಪರಿಶೀಲನೆ ನಡೆಯಲಿದೆ.

### ಮರಾಠ ಅಭಿವೃದ್ಧಿ ನಿಗಮ: ಸಾಲಸೌಲಭ್ಯಕ್ಕೆ ಅರ್ಜಿ

» ಚಿತ್ರದುರ್ಗ

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2023–24ನೇ ಸಾಲಿಗೆ ಮರಾಠ ಸಮುದಾಯಗಳ ಅಭಿವೃದ್ಧಿಗಾಗಿ ವಿವಿಧ ಯೋಜನೆಯಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಶಹಜೀರಾಜೇ ಸಮೃದ್ಧಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ, ಅರಿವು–ಶೈಕ್ಷಣಿಕ ಸಾಲ, 2 ರಿಂದ 5 ಎಕರೆ ಜಮೀನು ಹೊಂದಿದವರಿಗೆ ಜೀಜಾವು–ಜಲ ಭಾಗ್ಯ (ಗಂಗಾ ಕಲ್ಯಾಣ ನೀರಾವರಿ), 8 ಲಕ್ಷ ಆದಾಯ ಮಿತಿ ಹೊಂದಿದವರಿಗೆ ರಾಜಶ್ರೀ ಶಾಹುಮಹಾರಾಜ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ, ಮರಾಠ ಮಿಲ್ಟ್ರಿ ಹೋಟೆಲ್, ಸ್ವಾವಲಂಬಿ ಸಾರಥಿ, ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗಕ್ಕಾಗಿ ಸಾಲ ಹಾಗೂ ಯುವ ಜನರಿಗೆ ಸರ್ಕಾರಿ ತರಬೇತಿ ಸಂಸ್ಥೆಗಳಲ್ಲಿ ಕೌಶಲ್ಯ ಅಭಿವೃದ್ಧಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಗಳಿಗೆ ಸೇವಾ ಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಅಕ್ಟೋಬರ್ 30 ಕೊನೆ ದಿನ. ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆ ದಿನಾಂಕ ಇರುವುದಿಲ್ಲ.

ರಾಜ್ಯದ ಖಾಯಂ ನಿವಾಸಿಗಳಾದ, ಪ್ರವರ್ಗ–3(ಬಿ) ಅಡಿಯಲ್ಲಿ ಬರುವ ಮರಾತ, ಮರಾಠ, ಅರೆ ಕ್ಷತ್ರಿ, ಅರೆ ಮರಾಠ, ಆರ್ಯಮರಾಠ, ಆರ್ಯ, ಆರ್ಯರು, ಕೊಂಕಣ, ಮರಾಠ, ಕ್ಷತ್ರಿಯ ಮರಾತ,/ಕ್ಷತ್ರಿಯ ಮರಾಠ, ಕುಳವಾಡಿ ಸಮುದಾಯಗಳಿಗೆ ಸೇರಿದ ಜಾತಿ ಆದಾಯ ಪ್ರಮಾಣ ಪತ್ರ ಹೊಂದಿದ, 18 ರಿಂದ 55 ವರ್ಷಗಳ ಮಿತಿಯಲ್ಲಿರುವ, ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಕುಟುಂಬದ ಒಬ್ಬರಿಗೆ ಮಾತ್ರ ಸಾಲ ಸೌಲಭ್ಯ ಒದಗಿಸಲಾಗುವುದು, ಶೈಕ್ಷಣಿಕ ಹಾಗೂ ಸ್ವಾವಲಂಬಿ ಸಾರಥಿ ಯೋಜನೆಯಡಿ ಸಾಲ ಪಡೆಯುವ ಅಭ್ಯರ್ಥಿಗಳ ವಯೋಮಿತಿ 18 ರಿಂದ 30 ವರ್ಷಗಳು ಇರಬೇಕು. ಶೈಕ್ಷಣಿಕ ಸಾಲ ಮಂಜೂರಾತಿ ವಾರ್ಷಿಕ ರೂ.3.5 ಲಕ್ಷ, ಇತರೆ ಯೋಜನೆಗಳಿಗೆ ಗ್ರಾಮಾಂತರ ಪ್ರದೇಶದಲ್ಲಿ ವಾರ್ಷಿಕ ರೂ.98 ಸಾವಿರ ಹಾಗೂ ನಗರ ಪ್ರದೇಶದಲ್ಲಿ ವಾರ್ಷಿಕ ರೂ.1.20 ಲಕ್ಷ ಆದಾಯ ಮಿತಿ ನಿಗದಿಪಡಿಸಲಾಗಿದೆ. ಯೋಜನೆಗಳ ಫಲಾನುಭವಿಗಳ ಆಯ್ಕೆಯಲ್ಲಿ ನಿಯಮಾನುಸಾರ ಮಹಿಳೆಯರಿಗೆ ಶೇ.33 ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1% ರಷ್ಟು ಮೀಸಲಾತಿಯನ್ನು ನೀಡಲಾಗುವುದು.

ಸೇವಾಸಿಂಧು ಪೋರ್ಟಲ್‌ನಡಿ ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ–ಒನ್, ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನಡಿ ಅರ್ಜಿ ಸಲ್ಲಿಸಬಹುದು, ನಿರ್ದೇಶಕರ ಮಂಡಳಿಯ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯಬಯಸುವವರೂಸಹ ಆನ್‌ಲೈನ್ ನಲ್ಲಿ ಪ್ರತ್ಯೇಕ ಅರ್ಜಿಯನ್ನು ಸಲ್ಲಿಸುವುದು, ಒಂದು ಕುಟುಂಬದ ಬಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸಬಹುದು, ಅರ್ಜಿದಾರರು ಸರ್ಕಾರದ ಹಾಗೂ ನಿಗಮದ ನಿರ್ದೇಶಕ ಮಂಡಳಿಯು ಕಾಲಕಾಲಕ್ಕೆ ವಿಧಿಸುವ ಇನ್ನಿತರ ಅರ್ಹತೆ ಮತ್ತು ನಿಬಂಧನೆಗಳನ್ನು ಹೊಂದಿದವರಾಗಿರಬೇಕು.

ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ https://kmcdc.karnataka.gov.in ಅಥವಾ ಕಚೇರಿ ದೂರವಾಣಿ ಸಂಖ್ಯೆ 08194–220882 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಇ. ಸಂಪತ್‌ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಕಾರಾಗೃಹ ಅಧೀಕ್ಷಕಿ ಮಹದೇವಿ ಎಂ.ಮರಕಟ್ಟಿ ಮನವಿ

# ಎಲ್ಲರೂ ಪೋಕ್ಸೋ ಕಾಯ್ದೆ ಬಗ್ಗೆ ತಿಳಿದುಕೊಳ್ಳಿ

» ಚಿತ್ರದುರ್ಗ



ಅಪ್ರಾಪ್ತ ಬಾಲಕಿಯರ ಮೇಲೆ ಅತ್ಯಾಚಾರ ಪ್ರಕರಣಗಳು ಜಾಸ್ತಿಯಾಗುತ್ತಿದ್ದು, ಪೋಕ್ಸೋ ಕಾಯಿದೆ ಬಗ್ಗೆ ಮಹಿಳೆಯರು ತಿಳಿದುಕೊಂಡಿರಬೇಕು ಎಂದು ಜಿಲ್ಲಾ ಕಾರಾಗೃಹ ಅಧೀಕ್ಷಕಿ ಶ್ರೀಮತಿ ಮಹದೇವಿ ಎಂ.ಮರಕಟ್ಟಿ ಎಚ್ಚರಿಸಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ವತಿಯಿಂದ ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿ ತ.ರಾ.ಸು.ರಂಗಮಂದಿರದಲ್ಲಿ ಸೋಮವಾರ ನಡೆದ ತಾಲ್ಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಉದ್ಘಾಟಿಸಿ ಮಾತನಾಡಿದರು.

ಪೋಕ್ಸೋ ಪ್ರಕರಣಗಳು ಹೆಚ್ಚಾಗುತ್ತಿದ್ದು, ಶಾಲಾ–ಕಾಲೇಜುಗಳಿಗೆ ಹೋಗುವ ಹೆಣ್ಣು ಮಕ್ಕಳ ಮೇಲೆ ವಿಶೇಷ ನಿಗಾ ಇರಿಸಿ ಅನಾಹುತಗಳನ್ನು ತಪ್ಪಿಸುವಲ್ಲಿ ತಾಯಂದಿರ ಪಾತ್ರ ಮುಖ್ಯ. ಸೂಕ್ಷ್ಮವಾದ ವಿಚಾರಗಳನ್ನು ನಿರ್ಲಕ್ಷಿಸಬೇಡಿ ಎಂದು ಸ್ವಸಹಾಯ ಸಂಘದ ಮಹಿಳೆಯರಲ್ಲಿ ಮನವಿ ಮಾಡಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನಾಡಿನಾದ್ಯಂತ ಇಂತಹ ಉಪಯುಕ್ತ ಕಾರ್ಯಕ್ರಮಗಳನ್ನು ಮಾಡಿಕೊಂಡು ಬರುತ್ತಿದೆ. ಯೋಜನೆಯಿಂದ ಸಿಗುವ ತರಬೇತಿಗಳನ್ನು ಸದುಪಯೋಗಪಡಿಸಿಕೊಂಡು ಸ್ವಾವಲಂಭಿಗಳಾಗಿ ಬದುಕು ಕಟ್ಟಿಕೊಳ್ಳಿ. ಕೇವಲ ಅಡುಗೆ ಮನೆಗೆ ಮೀಸಲಾಗಿರುವ ಮಹಿಳೆಯರನ್ನು ಮನೆಯಿಂದ ಹೊರ ತಂದು ಸ್ವಾವಲಂಭಿಗಳಾಗಿ ಬದುಕುವುದನ್ನು ಕಲಿಸುತ್ತಿದೆ. ತರಬೇತಿಗಳನ್ನು ಪಡೆದು ಮನೆಯಲ್ಲಿ ಕುಳಿತರೆ ಪ್ರಯೋಜನವಿಲ್ಲ. ದುಡಿಮೆಯ ಮಾರ್ಗ ಕಂಡುಕೊಂಡು ಮಾರ್ಕೆಟಿಂಗ್ ವ್ಯವಸ್ಥೆಯನ್ನು ಕಲ್ಪಿಸಿಕೊಳ್ಳುವ ಕೌಶಲ್ಯ ನಿಮ್ಮಲ್ಲಿರಬೇಕು ಎಂದು ಹೇಳಿದರು. ಶಾಸಕ ಕೆ.ಸಿ.ವೀರೇಂದ್ರ ಅವರ ಸಹೋದರಿ ವೀಣಾ ಮಾತನಾಡಿ, ಮಹಿಳಾ ಸ್ವಸಹಾಯ ಸಂಘ ಎಂದಾಕ್ಷಣ ಸಾಲ ಪಡೆದು ಮಕ್ಕಳ ಮದುವೆ ಮಾಡುವುದು, ಮನೆ ಕಟ್ಟಿಸಿಕೊಳ್ಳುವುದು ಇಷ್ಟಕ್ಕೆ ಮಾತ್ರ ಸೀಮಿತವಾಗಬಾರದು. ತರಬೇತಿ ಪಡೆದುಕೊಂಡು ಸ್ವಂತ ಕಾಲ ಮೇಲೆ ನಿಂತು ಸ್ವಾವಲಂಭಿಯಾಗಿ ಬದುಕುವ ಸಾಮರ್ಥ್ಯ ಕಂಡುಕೊಳ್ಳಬೇಕು. ನೀವುಗಳು ಸಿದ್ದಪಡಿಸುವ ಗುಣಮಟ್ಟದ ವಸ್ತುಗಳಿಗೆ ಬೆಂಗಳೂರಿನಲ್ಲಿ ಮಾರುಕಟ್ಟೆ ಮಾಡಿಕೊಡುವುದಾಗಿ ಭರವಸೆ ಕೊಟ್ಟರು.

ನಗರಸಭೆ ಮಾಜಿ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ ವಿಚಾರಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದರು. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ಪ್ರಾದೇಶಿಕ ನಿರ್ದೇಶಕಿ ಶ್ರೀಮತಿ ಬಿ.ಗೀತಾ, ನಗರಸಭೆ ಸದಸ್ಯೆ ಪಿ.ಕೆ.ಮೀನಾಕ್ಷಿ, ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಕೆ.ಆರ್. ಮಂಜುನಾಥ್, ಸದಸ್ಯರುಗಳಾದ ರೂಪ ಜನಾರ್ಧನ್, ನಾಗರಾಜ್ ಸಂಗಂ, ಕಿರಣ್‌ಶಂಕರ್ ವೇದಿಕೆಯಲ್ಲಿದ್ದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ದಿನೇಶ್‌ಪೂಜಾರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲ್ಲೂಕು ಯೋಜನಾಧಿಕಾರಿ ಬಿ.ಅಶೋಕ್, ಜ್ಞಾನವಿಕಾಸ ಸಮನ್ವಯಾಧಿಕಾರಿ ಶ್ರೀಮತಿ ಸುಧಾ, ವಲಯ ಮೇಲ್ವಿಚಾರಕ ಸಂದೀಪ್ ವಿಚಾರಗೋಷ್ಠಿಯಲ್ಲಿ ಹಾಜರಿದ್ದರು.

ಜನಸಂಪರ್ಕ ಸಭೆಯಲ್ಲಿ ಟಿ.ರಘುಮೂರ್ತಿ ಖಡಕ್ ಎಚ್ಚರಿಕೆ

# ಸುಮಾರು ವರ್ಷಗಳಿಂದ ಜಾಂ ಡಾಊರಿದ ಅಧಿಕಾರಿಗಳು ಜಾಗ ಖಾಲಿ ಮಾಡಿ: ಶಾಸಕ

» ಚಳ್ಳಕೆರೆ



ಐದು ವರ್ಷ ಮೇಲ್ಪಟ್ಟು ಇಲ್ಲೇ ಕಾರ್ಯನಿರ್ವಹಿಸುವ ಎಲ್ಲಾ ಅಧಿಕಾರಿಗಳ ವಿರುದ್ದ ವರದಿ ಸಿದ್ದ ಪಡಿಸಿ ಸರ್ಕಾರಕ್ಕೆ ಪತ್ರಬರೆಯಿರಿ, ಎಲ್ಲಾ ಅಧಿಕಾರಿಗಳು ಎರಡ್ಮೂರು ವರ್ಷ ಹೊರಗಡೆ ಹೋಗಿ ರಿಲೀಫ್ ಆಗಿ ಬರಲಿ ಎಂದು ಶಾಸಕ ಟಿ.ರಘುಮೂರ್ತಿ ಯೋಜನಾ ನಿರ್ದೇಶಕ ಮಹೇಂದ್ರಕುಮಾರಗೆ ಸೂಚನೆ ನೀಡಿದರು.ಅವರು, ನಗರದ ನಗರಸಭೆ ಕಾರ್ಯಾಲಯದಲ್ಲಿ ಸೋಮವಾರ ಏರ್ಪಡಿಸಿದ್ದ ಜನಸಂಪರ್ಕಸಭೆಯಲ್ಲಿ ಸಾರ್ವಜನಿಕರಿಂದ ಬಂದ ದೂರುಗಳನ್ನು ಆಲಿಸಿ ಅಧಿಕಾರಿಗಳಿಗೆ ಹೇಳಿದ ಮಾತಿನಪರಿ. ಕಳೆದ ಸಭೆಯಲ್ಲಿ ಸಾರ್ವಜನಿಕರು ಹೇಳಿದ ದೂರಗಳಿಗೆ ನೀವು ಯಾವ ರೀತಿ ಸ್ಪಂದಿಸಿದ್ದೀರ, ಸಭೆಯಲ್ಲಿ ದೂರು ಹೇಳಿದ ವ್ಯಕ್ತಿಗಳನ್ನು ಗುರಿಯಾಗಿಸಿ, ಕೆಲಸ ಮಾಡದೆ ಇಲ್ಲಸಲ್ಲದ ಕಾನೂನು ಹೇಳಿ ಅವರನ್ನು ಅಲೆದಾಡುವಂತೆ ಮಾಡುತ್ತಿದ್ದೀರ. ಜನರು ದೂರು ಹೇಳುವುದು ತಪ್ಪೆ ಎಂದು ಶಾಸಕರು ಅಧಿಕಾರಿಗಳನ್ನು ಪ್ರಶ್ನಿಸಿದರು.


ನಗರಸಭೆಯ 11ನೇ ವಾರ್ಡ್‌ನ ಸುಗುಣವೆಂಬ ಗೃಹಿಣಿ ನನ್ನ ಎರಡೂ ಸೈಟುಗಳ ಇ–ಸ್ವತ್ತು ಹಾಗೂ ಇತರೆ ದಾಖಲಾತಿಗಳನ್ನು ಸರಿಪಡಿಸಿಕೊಡಲು ಬಿಲ್‌ಕಲೆಕ್ಟರ್ ಮಂಜುನಾಥ 7 ಲಕ್ಷ ಹಣ ಕೇಳಿದ್ದು ನಂತರ ಮೂರು ಲಕ್ಷ ಕೊಡಿ ಎಂದು ಒತ್ತಾಯಿಸಿದ್ದಾರೆ. ರಿಯಲ್ ಎಸ್ಟೇಟ್ ಉದ್ಯಮಿ ಆರ್.ಜಗದೀಶ್ ಮಾತನಾಡಿ, ಇ–ಸ್ವತ್ತು ಪಡೆಯಲು ನಿರಂತರ ಓಡಾಟ ನಡೆಸಬೇಕು, ಅವರು ಕೇಳಿದ ಹಣವನ್ನು ನೀಡಬೇಕು ಇಲ್ಲವಾದರೆ ನಿಮ್ಮ ಪೈಲ್ ಇಲ್ಲವೆಂದು ಸಬೂಬು ಹೇಳುತ್ತಾರೆ.

ಜೀವ ವಿಮೆ ಅಭಿವೃದ್ಧಿ ಅಧಿಕಾರಿ ಬಿ.ತಿಪ್ಪೇಸ್ವಾಮಿ, ಸೋಮಗುದ್ದು ರಸ್ತೆಯ ನಮ್ಮ ಕಾಂಪ್ಲೆಕ್ಸ್ ಇ–ಖಾತೆಯ ಬಗ್ಗೆ ಮೂರು ತಿಂಗಳಿನಿಂದ ಓಡಾಡುತ್ತಿದ್ದೇನೆ, ನನ್ನ ಪೈಲ್ ಕಳೆದಿದೆ ಎಂದಿದ್ದಕ್ಕೆ ಹುಡುಕಿಕೊಟ್ಟರೂ ಕೆಲಸ ಮಾತ್ರವಾಗಿಲಿಲ್ಲ. ನಗರಸಭೆಯ ಸಿಬ್ಬಂದಿ ನಿರ್ಲಕ್ಷ್ಯತನ ಲಂಚಪಡೆಯುವಿಕೆ ಹಾಗೂ ಉದಾಸೀನದಿಂದ ಮಾತನಾಡುವ ಪ್ರವೃತ್ತಿಯ ಬಗ್ಗೆ ನಗರಸಭೆ ಸದಸ್ಯೆ ಎಂ.ನಾಗವೇಣಿ, ಎಚ್.ಪ್ರಶಾಂತ್‌ಕುಮಾರ್, ಶಿವಕುಮಾರ್, ಜಯಣ್ಣ, ವೀರಭದ್ರಪ್ಪ, ಸುಮಭರಮಣ್ಣ ಮುಂತಾದರು ನಗರಸಭೆ ಸಿಬ್ಬಂದಿ ವರ್ಗದ ಬಗ್ಗೆ ಸಾರ್ವಜನಿಕರು ಮಾಡಿದ ಆರೋಪದ ಬಗ್ಗೆ ತಿಳಿಸಿದರು.

ಸಭೆಯಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜೆ.ಕೆ.ಹೊನ್ನಯ್ಯ, ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ.ರಾಘವೇಂದ್ರ, ಸದಸ್ಯರಾದ ಟಿ.ಮಲ್ಲಿಕಾರ್ಜುನ್, ಸಿ.ಕವಿತಾ, ಸುಮಾ, ಜೈತುಂಬಿ, ಕೆ.ವೀರಭದ್ರಯ್ಯ, ವ್ಯವಸ್ಥಾಪಕ ಲಿಂಗರಾಜು, ಕಂದಾಯಾಧಿಕಾರಿ ಸತೀಶ್, ಕಂದಾಯ ನಿರೀಕ್ಷಕ ವಿಶ್ವನಾಥ, ಇ.ತಿಪ್ಪೇಸ್ವಾಮಿ, ಓಬಣ್ಣ, ನಾಗರಾಜ, ಎಇಇ ಕೆ.ವಿನಯ್, ಜೆ.ಇ.ಲೋಕೇಶ್, ಹಿರಿಯ ಆರೋಗ್ಯ ನಿರೀಕ್ಷಕರಾದ ಮಹಲಿಂಗಪ್ಪ, ದಾದಾಪೀರ್, ಗಣೇಶ್, ಗೀತಾಕುಮಾರಿ, ಬಾಸ್ಕರ್, ಹರೀಶ್, ಎಸ್.ಎಲ್.ಮಂಜಣ್ಣ, ಚೇತನ್, ಪಿಎಸ್‌ಐ ಕೆ.ಸತೀಶ್‌ನಾಯ್ಕ, ಎಇಇ ಎನ್.ಕಾವ್ಯ, ಬೆಸ್ಕಾಂ ಎಇಇ ರಾಜು ಉಪಸ್ಥಿತರಿದ್ದರು.

ನಗರಸಭೆ ಅನುಷ್ಠಾನಗೊಳಿಸುವ

# ಎಲ್ಲಾ ಕಾಮಗಾರಿಗೂ ಗುಣಮಟ್ಟದಾಗಿರಬೇಕು



» ಚಳ್ಳಕೆರೆ

ಸರ್ಕಾರದ ವಿವಿಧ ಯೋಜನೆಗಳ ಉತ್ತಮ ಅನುಷ್ಠಾನದ ಮೂಲಕ ನಾಗರೀಕರಿಗೆ ನೀಡುವ ಸೌಲಭ್ಯಗಳು ಸದುಪಯೋಗವಾಗಬೇಕು. ಯಾವುದೇ ಕಾರಣಕ್ಕೂ ಗುಣಮಟ್ಟವಿಲ್ಲದ ಕಾಮಗಾರಿಯನ್ನು ನಡೆಸಬಾರದು ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಬಳ್ಳಾರಿ ರಸ್ತೆಯ ಹಳೇಟೋಲ್‌ಗೇಟ್‌ನಿಂದ ವೀರಶೈವ ಸ್ಮಶಾನದ ತನಕ 95 ಲಕ್ಷ ವೆಚ್ಚದ ಶೆಡ್‌ಗಳ ನಿರ್ಮಾಣ, ಸಂತೆ ಮೈದಾನದ ವಿನಾಯಕ ಕಾಂಪ್ಲೆಕ್ಸ್ ಹಿಂಭಾಗದ ವಾಣಿಜ್ಯ ಮಳಿಗೆ ನಿರ್ಮಾಣದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು. ಸರ್ಕಾರ ಸಾರ್ವಜನಿಕರ ಹಿತದೃಷ್ಠಿಯಿಂದ ವಿವಿಧ ಕಾಮಗಾರಿಗಳನ್ನು ಆಯೋಜಿಸಿ ಆರ್ಥಿಕ ನೆರವು ನೀಡುತ್ತಾ ಬಂದಿದೆ. ಚಳ್ಳಕೆರೆ ನಗರದ ವಾಣಿಜ್ಯ ಕ್ಷೇತ್ರದಲ್ಲಿ ತನ್ನದೇಯಾದ ಹೆಸರು ಗಳಿಸಿದ್ದು, ವಾಣಿಜ್ಯೋದ್ಯಮಿ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಬೆಳೆಸಲು ಸಂತೆ ಮೈದಾನ ಮತ್ತು ಬಳ್ಳಾರಿ ರಸ್ತೆಯಲ್ಲಿ ಶೆಡ್, ಮಳಿಗೆ ನಿರ್ಮಾಣ ಕಾರ್ಯಕ್ಕೆ ಇಂದು ಚಾಲನೆ ನೀಡಲಾಗಿದೆ. ನಗರಸಭೆ ಆದಾಯವನ್ನು ಹೆಚ್ಚಿಸುವ ದೃಷ್ಠಿಯಿಂದ ಎಲ್ಲಾ ಮಳಿಗೆಗಳಿಗೆ ಬಾಡಿಗೆ ನಿಗದಿಪಡಿಸಿ ಸಾರ್ವಜನಿಕರಿಗೆ ನೀಡುವಂತೆ ಸಲಹೆ ನೀಡಿದರು. ಪೌರಾಯುಕ್ತ ಸಿ.ಚಂದ್ರಪ್ಪ ಮಾತನಾಡಿ, ನಗರಸಭೆ ಉದ್ಯಮ ನಿಧಿಯಡಿಯಲ್ಲಿ ಈ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ. ಬಳ್ಳಾರಿ ರಸ್ತೆಯ 37 ಶೆಡ್ ನಿರ್ಮಾಣ ಕಾಮಗಾರಿಗೆ 95 ಲಕ್ಷ, ಸಂತೆ ಮೈದಾನದ ಮಳಿಗೆಗಳ ನಿರ್ಮಾಣಕ್ಕೆ 90 ಲಕ್ಷ ಹಣವನ್ನು ವೆಚ್ಚ ಮಾಡಲಾಗುತ್ತಿದೆ. ಆರ್ಹರನ್ನು ಗುರುತಿಸಿ ಅವರಿಗೆ ಬಾಡಿಗೆ ರೂಪದಲ್ಲಿ ಶೆಡ್ ಮತ್ತು ಮಳಿಗೆ ನೀಡಲಾಗುವುದು, ಎಲ್ಲಾ ಹಂತದಲ್ಲೂ ಪಾರದರ್ಶಕತೆಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದರು. ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ.ರಾಘವೇಂದ್ರ, ಸದಸ್ಯರಾದ ಎಸ್.ಜಯಣ್ಣ, ಶಿವಕುಮಾರ್, ಟಿ.ಮಲ್ಲಿಕಾರ್ಜುನ್, ಸಿ.ಕವಿತಾ, ಸುಮಾ, ಜೈತುಂಬಿ, ಕೆ.ವೀರಭದ್ರಯ್ಯ, ಗುತ್ತಿಗೆದಾರ ಎನ್.ಟಿ.ವೀರೇಶ್ ಉಪಸ್ಥಿತರಿದ್ದರು.

### ಇಸ್ರೇಲ್ ದೇಶದಲ್ಲಿರುವವರಿಗೆ ಸಹಾಯವಾಣಿ

**ದಾವಣಗೆರೆ:** ಇಸ್ರೇಲ್ ದೇಶದ ಪ್ರಸ್ತುತ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಇಸ್ರೇಲ್ ದೇಶಗಳಲ್ಲಿ ವ್ಯಾಪಾರ, ಶಿಕ್ಷಣ, ಉದ್ಯೋಗ ಹಾಗೂ ಇತರೆ ಉದ್ದೇಶಗಳಿಗೆ ಇಸ್ರೇಲ್ ದೇಶಕ್ಕೆ ಹೋಗಿರುವ ಮತ್ತು ಅಲ್ಲಿ ವಾಸವಾಗಿರುವ ದಾವಣಗೆರೆ ಜಿಲ್ಲೆಯ ಪ್ರಜೆಗಳಿದ್ದಲ್ಲಿ, ದಾವಣಗೆರೆ ಜಿಲ್ಲಾಧಿಕಾರಿಗಳ ಕಛೇರಿಯ ಜಿಲ್ಲಾ ವಿಪತ್ತು ನಿರ್ವಹಣಾ ತಜ್ಞರ ದೂ. ಸಂ. 6361382915 ಅಥವಾ ರಾಜ್ಯ ಸರ್ಕಾರದ ತುರ್ತು ದೂ. ಸಂ. 080–2234067 ಮತ್ತು 080–22253707 ಗೆ ಸಂಪರ್ಕಿಸಿ ಅವರ ಬಗ್ಗೆ ಮಾಹಿತಿ ನೀಡಲು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಶಿಕ್ಷಕರ ಸಮಸ್ಯೆ ಆಲಿಸಿದ ವೈ.ಎ.ನಾರಾಯಣಸ್ವಾಮಿ

» ಚಿತ್ರದುರ್ಗ



ಶಿಕ್ಷಕರ ಕ್ಷೇತ್ರದಲ್ಲಿ ಕಳೆದ ಹದಿನೆಂಟು ವರ್ಷಗಳಿಂದಲೂ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡಿಕೊಂಡು ಬರುತ್ತಿದ್ದೇನೆ. ನಾನು ಯಾವುದೇ ಜಾತಿಗೆ ಸೀಮಿತವಾಗಿಲ್ಲ. ಎಲ್ಲರೂ ಶಿಕ್ಷಕರ ಜಾತಿ ಎಂದು ತಿಳಿದುಕೊಂಡಿದ್ದೇನೆ. ಸಣ್ಣಪುಟ್ಟ ಭಿನ್ನಾಭಿಪ್ರಾಯಗಳನ್ನು ಬಿಟ್ಟು ಎಲ್ಲಾ ಗುಂಪು ಒಂದಾಗಿ ಈ ಬಾರಿಯೂ ನನ್ನನ್ನು ಗೆಲ್ಲಿಸಿ ಆರು ವರ್ಷಗಳ ಕಾಲ ನಿಮ್ಮನ್ನು ತಲೆ ಮೇಲೆ ಹೊತ್ತು ತಿರುಗುತ್ತೇನೆಂದು ಆಗ್ನೇಯ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಸದಸ್ಯ ವೈ.ಎ.ನಾರಾಯಣಸ್ವಾಮಿ ಶಿಕ್ಷಕರುಗಳಲ್ಲಿ ಮನವಿ ಮಾಡಿದರು.

ಪ್ರವಾಸಿ ಮಂದಿರಕ್ಕೆ ಶುಕ್ರವಾರ ಆಗಮಿಸಿದ್ದ ವೈ.ಎ.ನಾರಾಯಣಸ್ವಾಮಿ ನೂರಾರು ಶಿಕ್ಷಕರುಗಳನ್ನುದ್ದೇಶಿಸಿ ಮಾತನಾಡುತ್ತ ಒಂದು ಬಾರಿ ಗೆದ್ದವರು ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ಗೆಲ್ಲುವುದಿಲ್ಲ ಎನ್ನುವ ತಪ್ಪು ಅಭಿಪ್ರಾಯವಿದೆ. ಆದರೆ ನಾನು ಮೂರು ಸಾರಿ ಗೆದ್ದಿದ್ದೇನೆ. ಇದಕ್ಕೆ ಚಿತ್ರದುರ್ಗ, ದಾವಣಗೆರೆ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಯ ಶಿಕ್ಷಕರುಗಳು ನನ್ನ ಮೇಲಿಟ್ಟಿರುವ ಪ್ರೀತಿ, ವಿಶ್ವಾಸ, ನಂಬಿಕೆಯೆ ಕಾರಣ ಎಂದು ಸಂತಸ ವ್ಯಕ್ತಪಡಿಸಿದರು.

ಐದು ಜಿಲ್ಲೆ, 34 ತಾಲ್ಲೂಕುಗಳಲ್ಲಿ ಸುತ್ತಾಡಿ ಶಿಕ್ಷಕರು, ಉಪನ್ಯಾಸಕರುಗಳ ಸಮಸ್ಯೆಗಳನ್ನು ಆಲಿಸಿದ್ದೇನೆ. ಮುಖ್ಯ ಶಿಕ್ಷಕರುಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಹುದ್ದೆಗೆ ಬಡ್ತಿ ಕೊಡಿಸಿದ್ದೇನೆ. ತಾಲ್ಲೂಕು ಕಚೇರಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳಲ್ಲಿ ಗೊಂದಲ ಸೃಷ್ಟಿಯಾಗುತ್ತಿದೆ. ಮತ ಚಲಾವಣೆಗೆ ಎಪಿಕ್ ಕಾರ್ಡ್, ಆಧಾರ್ ಕಾರ್ಡ್, ಫೋಟೋ ಮುಖ್ಯ. ಎಲ್ಲಾ ತಹಶೀಲ್ದಾರ್‌ಗಳಿಗೆ ಮಾರ್ಗಸೂಚಿ ನೀಡುವಂತೆ ಜಿಲ್ಲಾಧಿಕಾರಿ ಜೊತೆ ಮಾತನಾಡಿದ್ದೇನೆ. ಎಲ್ಲೆಲ್ಲಿ ಸಮಸ್ಯೆಯಿದೆಯೋ ನನಗೆ ವಾಟ್ಸಪ್ ಕಳಿಸಿ ಮುಂದಿನ ಫೆಬ್ರವರಿ ಒಳಗೆ ಮುಖ್ಯ ಶಿಕ್ಷಕರು, ಪ್ರಿನ್ಸಿಪಾಲ್ ಹುದ್ದೆಗೆ ಬಡ್ತಿ ಕೊಡಿಸುತ್ತೇನೆ. ಇಪ್ಪತ್ತು ವರ್ಷಗಳಿಂದ ಕುಟುಂಬದ ಜೊತೆ ಕಾಲ ಕಳೆಯುವುದನ್ನು ಬಿಟ್ಟು ನಿಮ್ಮಗಳ ಸೇವೆಗೆ ಮುಡುಪಾಗಿ ನಾಲ್ಕನೆ ಬಾರಿ ಚುನಾವಣೆಗೆ ಸಜ್ಜಾಗಿದ್ದೇನೆ. ಮತ್ತೊಮ್ಮೆ ಗೆಲ್ಲಿಸಿ ನಿಮ್ಮಗಳ ಸೇವೆ ಮಾಡಲು ಅವಕಾಶ ಕೊಡಿ ಎಂದು ಶಿಕ್ಷಕರುಗಳಲ್ಲಿ ವಿನಂತಿಸಿದರು.

ಕ್ಷೇತ್ರದಲ್ಲಿ ನಲವತ್ತು ಪರ್ಸೆಂಟ್ ಹೆಣ್ಣುಮಕ್ಕಳಿದ್ದಾರೆ. ಎಲ್ಲರನ್ನೂ ಗೌರವಿಸಿ ನನ್ನ ಬಳಿ ಬಂದ ಎಲ್ಲರಿಗೂ ಕೆಲಸ ಮಾಡಿಕೊಟ್ಟಿದ್ದೇನೆ. ಕಾಂಗ್ರೆಸ್‌ನಿಂದ ಎಷ್ಟೆ ಬಲಿಷ್ಟ ಅಭ್ಯರ್ಥಿ ಚುನಾವಣೆಗೆ ನಿಂತರೂ ಗೆಲ್ಲಲ್ಲ. ಎಲ್ಲಾ ಸಮಸ್ಯೆಗಳು ಗೊತ್ತಿದೆ. ಅನುದಾನಿತ ಶಾಲೆ ಶಿಕ್ಷಕರುಗಳ ವೇತನ ನಿಲ್ಲಿಸಲು ಬಿಡಲ್ಲ. ಪ್ರತಿ ವರ್ಷ ಬಡ್ತಿ ಕೊಡಿಸುತ್ತೇನೆ. ಯಾರಿಗೂ ವಂಚಿಸಿ, ಮೋಸ ಮಾಡಿ ಹಣ ಲಪಟಾಯಿಸಿಲ್ಲ. ಇನ್ನೆಂದು ಎಂ.ಎಲ್.ಎ. ಚುನಾವಣೆ ತಂಟೆಗೆ ಹೋಗಲ್ಲ ಎಂದು ಶಿಕ್ಷಕರುಗಳಿಗೆ ವೈ.ಎ.ನಾರಾಯಣಸ್ವಾಮಿ ವಾಗ್ದಾನ ಮಾಡಿದರು.

ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘದ ಅಧ್ಯಕ್ಷ ನಾಗೇಂದ್ರಪ್ಪ, ಜಿಲ್ಲಾ ಉಪನ್ಯಾಸಕರ ಸಂಘದ ಕಾರ್ಯದರ್ಶಿ ಕೆಂಚವೀರಪ್ಪ, ಸಹ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಶಿವಣ್ಣ, ಸರ್ಕಾರಿ ನೌಕರರ ಸಂಘದ ಸದಸ್ಯ ಶ್ರೀನಿವಾಸ್, ಮಾಧ್ಯಮಿಕ ಶಿಕ್ಷಕರ ಸಂಘದ ಅಧ್ಯಕ್ಷ ವೃಷಬೇಂದ್ರಯ್ಯ, ದೈಹಿಕ ಶಿಕ್ಷಕರ ಸಂಘದ ಪದಾಧಿಕಾರಿಗಳು, ಪ್ರಾಚಾರ್ಯರ ಸಂಘ, ಐ.ಟಿ.ಐ. ಡಿಪ್ಲಮೋ ಕಾಲೇಜಿನ ಸಂಘದ ಪದಾಧಿಕಾರಿಗಳು, ಬಿಜೆಪಿ.ವಕ್ತಾರ ನಾಗರಾಜ್‌ಬೇದ್ರೆ ಈ ಸಂದರ್ಭದಲ್ಲಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T